# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ

EDITOR: MAHESHWARI BHIMASHI BHARAMANNAVARA

BELAGAVI VARTE

KANNADA DAILY MORNING BELAGAVI

G-mail: belagavivarte1@gmail.com

epaper. belagavivarte.com

Regd No : G2/PMG/KA/NK/BM/157/26-28

Volume: 01 Issue : 50 WEDNESDAY 29-04-2026 PRGI No : KNKAN/26/A0962 Pages:4 Rs.2.00 M: 9742418836


## ರಾಜ್ಯಸಭೆ ಚುನಾವಣೆ ನೆಪ: ಅಯ್ಯೋ ಪಾಪ, ಡಿಸಿಎಂ ಆಗಿದ್ದಷ್ಟೇ ಲಾಭ; ಡಿಕೆಶಿಗೆ ಸದ್ಯಕ್ಕಿಲ್ಲ ಸಿಎಂ ಸ್ಥಾನ;

ಬೆಂಗಳೂರು: ಐದು ವಿಧಾನಸಭಾ ಚುನಾವಣೆಗಳ ಫಲಿತಾಂಶಗಳು ಮತ್ತು ದಾವಣಗೆರೆ ದಕ್ಷಿಣ ಮತ್ತು ಬಾಗಲ ಕೋಟೆಯ ಎರಡು ಸ್ಥಾನಗಳಿಗೆ ನಡೆದ ಉಪಚುನಾವಣೆ ಫಲಿತಾಂಶ ಮೇ 5ರ ನಂತರ ಪ್ರಕಟವಾಗಲಿದೆ.

ಚುನಾವಣೆ ಫಲಿತಾಂಶ ಪ್ರಕಟವಾದ ನಂತರ ಸಂಪುಟ ಪುನರ್ರಚನೆ ಮತ್ತು ನಾಯಕತ್ವ ಬದಲಾವಣೆಗೆ ಕಾಂಗ್ರೆಸ್ ಹೈಕಮಾಂಡ್ ಅನುಮೋದನೆ ನೀಡಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿಕೆ ಶಿವಕುಮಾರ್ ಕಾದು ಕುಳಿತಿದ್ದರು. ಆದರೆ ಮೇ-ಜೂನ್‌ನಲ್ಲಿ ಕರ್ನಾಟಕದ ನಾಲ್ಕು ರಾಜ್ಯಸಭಾ ಮತ್ತು ಏಳು ಪರಿಷತ್ ಸ್ಥಾನಗಳಿಗೆ ಚುನಾವಣೆ ನಡೆಯುವ ಸಾಧ್ಯತೆ ಇರುವುದರಿಂದ ಪಕ್ಷದ ಹೈಕಮಾಂಡ್ ನಿರ್ಧಾರವನ್ನು ಮತ್ತಷ್ಟು ಮುಂದೂಡಬಹುದು ಎಂದು ಮೂಲಗಳು ತಿಳಿಸಿವೆ.

ಎಐಸಿಸಿ ಅಧ್ಯಕ್ಷ ಮತ್ತು ರಾಜ್ಯಸಭೆ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ ನಾಲ್ಕು ರಾಜ್ಯಸಭಾ ಸದಸ್ಯರ ಅವಧಿ ಜೂನ್ 25, 2026 ರಂದು ಕೊನೆಗೊಳ್ಳಲಿದ್ದು, ದ್ವೈವಾರ್ಷಿಕ ಚುನಾವಣೆಗೆ ಜೂನ್ ಮೊದಲ ವಾರದಲ್ಲಿ ಅಧಿಸೂಚನೆ ಪ್ರಕಟಿಸುವ ಸಾಧ್ಯತೆಯಿದೆ. ಕಾಂಗ್ರೆಸ್ ನಾಲ್ಕು ಸ್ಥಾನಗಳಲ್ಲಿ ಮೂರು ಸ್ಥಾನಗಳನ್ನು ಗೆಲ್ಲಬಹುದಾದ್ದರಿಂದ ಈ ಸಮೀಕ್ಷೆಗಳು ನಿರ್ಣಾಯಕವಾಗಿವೆ ಎಂದು ಹಿರಿಯ ಕಾಂಗ್ರೆಸ್ ನಾಯಕರೊಬ್ಬರು ಹೇಳಿದ್ದಾರೆ.

ಪರಿಷತ್ತಿನ ಕಾಂಗ್ರೆಸ್ ಮುಖ್ಯ ಸಚೇತಕ, ಸಚಿವ ಸ್ಥಾನದ ಪ್ರಬಲ ಆಕಾಂಕ್ಷಿ ಸಲೀಂ ಅಹ್ಮದ್, ಮೇ 20 ರ ಮೊದಲು ಸಚಿವ ಸಂಪುಟ ಪುನರ್ರಚನೆ ಮಾಡಲಾಗುವುದು ಎಂದು ಹೇಳಿದರು, ಏಕೆಂದರೆ ಕಾಂಗ್ರೆಸ್ ಸರ್ಕಾರವು ತನ್ನ ಮೂರು ವರ್ಷಗಳ ಅಧಿಕಾರವನ್ನು ಪೂರ್ಣಗೊಳಿಸುತ್ತದೆ. ಕಲಬುರಗಿಯಲ್ಲಿ, ಸಚಿವ ಸ್ಥಾನದ ಆಕಾಂಕ್ಷಿಯೂ ಆಗಿರುವ ಜೇವರ್ಗಿ ಶಾಸಕ ಅಜಯ್ ಸಿಂಗ್ ಸೋಮವಾರ ಜೂನ್‌ನಲ್ಲಿ



ಪುನರ್ರಚನೆ ಆಗಬಹುದು ಎಂದು ಹೇಳಿದರು.

ಶಿವಕುಮಾರ್ ಅವರ ಪಾಳಯದ ಸದಸ್ಯರು, ವಿಶೇಷವಾಗಿ ಅವರ ಸಂಬಂಧಿ ಮತ್ತು ಕುಣಿಗಲ್ ಶಾಸಕ ಡಾ. ಎಚ್‌ಡಿ ರಂಗನಾಥ್, ಹೈಕಮಾಂಡ್ ಮೇ 15 ರಂದು ಡಿಕೆ ಶಿವಕುಮಾರ್ ಜನ್ಮದಿನದಂದು ತಮ್ಮ ನಾಯಕನಿಗೆ ಅಧಿಕಾರ ಹಸ್ತಾಂತರಿಸಲಿದೆ ಎಂದು ಸೋಮವಾರ ಹೇಳಿದ್ದಾರೆ. 2023 ರಲ್ಲಿ ಪಕ್ಷ ಅಧಿಕಾರಕ್ಕೆ ಬಂದ ಕೂಡಲೇ ಸಿದ್ದರಾಮಯ್ಯ ಮತ್ತು ಶಿವಕುಮಾರ್ ನಡುವೆ ನಡೆದ ಒಪ್ಪಂದವನ್ನು ಅವರು ಮತ್ತೆ ಉಲ್ಲೇಖಿಸಿದರು.

ಶೇ 100 ರಷ್ಟು ಗೊಂದಲವಿದೆ ಎಂಬುದು ನಿಜ. ಇದನ್ನು ಶೀಘ್ರವಾಗಿ ಪರಿಹರಿಸುವಂತೆ ನಾವು ಹೈಕಮಾಂಡ್ ಅನ್ನು ಪದೇ ಪದೇ ಒತ್ತಾಯಿಸುತ್ತಿದ್ದೇವೆ. ಒಪ್ಪಂದ ಎಲ್ಲರ ಮನಸ್ಸಿನಲ್ಲಿದೆ. ಆ ಒಪ್ಪಂದ ಏನೆಂದು ಹೈಕಮಾಂಡ್ ನಿರ್ಧರಿಸಬೇಕು. ಇಬ್ಬರೂ ನಾಯಕರು ಅದರ ಬಗ್ಗೆ ಮಾತನಾಡಲಿ. ಸಿದ್ದರಾಮಯ್ಯ ಉತ್ತಮ ಕೆಲಸ ಮಾಡಿದ್ದಾರೆ. ನನ್ನಂತಹ ಅನೇಕ ಪಕ್ಷದ ಕಾರ್ಯಕರ್ತರು ಶಿವಕುಮಾರ್ ಅವರನ್ನು ಮುಖ್ಯಮಂತ್ರಿ ಹುದ್ದೆಗೆ ನೇಮಿಸಬೇಕೆಂದು ಆಶಿಸುತ್ತಾರೆ ಎಂದು ಅವರು ಹೇಳಿದರು.

ಸಿದ್ದರಾಮಯ್ಯ ಅವರೇ ಮುಖ್ಯಮಂತ್ರಿಯಾಗಿ ಮುಂದುವರಿಯುತ್ತಾರೆ ಎಂದು ಸಿಎಂ ಬೆಂಬಲಿಗರು ನಂಬುತ್ತಾರೆ. ಆದರೆ ರಾಜೀನಾಮೆ ಅನಿವಾರ್ಯವಾದರೆ, ಗೃಹ ಸಚಿವ ಡಾ. ಜಿ. ಪರಮೇಶ್ವರ ಅವರಂತಹ ಅಹಿಂದ ನಾಯಕರನ್ನು ಅಧಿಕಾರ ವಹಿಸಿಕೊಳ್ಳಲು ಕೇಳಬಹುದು.

2013 ಮತ್ತು 2023 ರಲ್ಲಿ ಸಿದ್ದರಾಮಯ್ಯ ಅವರಂತೆ ಕಾಂಗ್ರೆಸ್ ಶಾಸಕಾಂಗ ಪಕ್ಷ (ಸಿಎಲ್‌ಪಿ) ಮುಖ್ಯಮಂತ್ರಿಯನ್ನು ಆಯ್ಕೆ ಮಾಡಲು ಹೈಕಮಾಂಡ್ ಅವಕಾಶ ನೀಡಬೇಕು ಎಂದು ಅವರು ಒತ್ತಾಯಿಸಿದ್ದಾರೆ. ಗುರುವಾರ ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ಅವರ ಕನ್ನಿಂಗ್‌ಹ್ಯಾಮ್ ರಸ್ತೆಯಲ್ಲಿರುವ ಅಪಾರ್ಟ್‌ಮೆಂಟ್‌ನಲ್ಲಿ ಔತಣಕೂಟಕ್ಕೆ ಸಿದ್ದರಾಮಯ್ಯ ಅವರ ಬೆಂಬಲಿಗರು ಭೇಟಿಯಾದಾಗ ಈ ಸಂಬಂಧ ಚರ್ಚೆ ನಡೆದಿದೆ ಎನ್ನಲಾಗಿದೆ. ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಸಿದ್ದರಾಮಯ್ಯ ಅವರನ್ನು ಮುಖ್ಯಮಂತ್ರಿ ಸ್ಥಾನದಿಂದ ಬದಲಾಯಿಸುವ ಅಪಾಯ ಎದುರಿಸಲು ಬಯಸುವುದಿಲ್ಲ ಎನ್ನಲಾಗಿದೆ.

ಕೇರಳದಲ್ಲಿ ಕಾಂಗ್ರೆಸ್ ನೇತೃತ್ವದ ಯುನೈಟೆಡ್ ಡೆಮಾಕ್ರಟಿಕ್ ಫ್ರಂಟ್ (ಯುಡಿಎಫ್) ಅಧಿಕಾರಕ್ಕೆ ಬಂದರೆ, ಎಐಸಿಸಿ ಪ್ರಧಾನ ಕಾರ್ಯದರ್ಶಿ (ಸಂಘಟನೆ) ಕೆಸಿ ವೇಣುಗೋಪಾಲ್, ಹಿರಿಯ ನಾಯಕ ರಮೇಶ್ ಚೆನ್ನಿತ್ತಲ ಮತ್ತು ವಿಡಿ ಸತೀಶನ್ ಅವರಂತಹ ಮುಂದುವರಿದ ಜಾತಿಗಳ ನಾಯಕರು ಮತ್ತೆ ನಾಯರ್ ಸಮುದಾಯದವರು ಸಿಎಂ ಹುದ್ದೆ ಸ್ಪರ್ಧೆಯಲ್ಲಿರುತ್ತಾರೆ ಎಂದು ಹಿಂದುಳಿದ ಜಾತಿಯ ಕಾಂಗ್ರೆಸ್ ನಾಯಕರೊಬ್ಬರು ದಿ ನ್ಯೂ ಇಂಡಿಯನ್ ಎಕ್ಸ್ ಪ್ರೆಸ್ ಗೆ ತಿಳಿಸಿದ್ದಾರೆ.

## ನಾಯಕತ್ವ ಬದಲಾವಣೆ ಊಹಾಪೋಹಗಳಿಗೆ ತೆರೆ ಎಳೆಯಿರಿ: ಹೈಕಮಾಂಡ್‌ಗೆ ಸಚಿವ ಸತೀಶ್ ಜಾರಕಿಹೊಳಿ ಆಗ್ರಹ



ಬೆಂಗಳೂರು: ರಾಜ್ಯ ರಾಜಕೀಯದಲ್ಲಿ ನಾಯಕತ್ವ ಬದಲಾವಣೆ ಕುರಿತು ಹರಿದಾಡುತ್ತಿರುವ ಊಹಾಪೋಹಗಳ ಕುರಿತು ಮಧ್ಯಪ್ರವೇಶಿರಿ ಕಾಂಗ್ರೆಸ್ ಹೈಕಮಾಂಡ್ ತೆರೆ ಎಳೆಯಬೇಕೆಂದು ಸಚಿವ ಸತೀಶ್ ಜಾರಕಿಹೊಳಿಯವರು ಮನವಿ ಮಾಡಿದ್ದಾರೆ.

ನವದೆಹಲಿಯಲ್ಲಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ಕರ್ನಾಟಕ ಉಸ್ತುವಾರಿ ಪ್ರಧಾನ ಕಾರ್ಯದರ್ಶಿ ರಂದೀಪ್ ಸಿಂಗ್ ಸುರ್ಜೇವಾಲಾ ಅವರನ್ನು ಭೇಟಿ ಮಾಡಿ, ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಕುರಿತ ವದಂತಿಗಳಿಗೆ ಸ್ಪಷ್ಟನೆ ನೀಡುವಂತೆ ವಿನಂತಿಸಿದರು.

ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, "ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಕುರಿತು ಹರಿದಾಡುತ್ತಿರುವ ಸುದ್ದಿಗಳು ಪಕ್ಷ ಮತ್ತು ಸರ್ಕಾರದ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇದೆ. ಆದ್ದರಿಂದ ಈ ಬಗ್ಗೆ ಹೈಕಮಾಂಡ್ ಸ್ಪಷ್ಟನೆ ನೀಡುವುದು ಅಗತ್ಯ" ಎಂದು ಹೇಳಿದರು.

ಇಂತಹ ಅನಿಶ್ಚಿತತೆ ಮುಂದುವರಿದರೆ ಆಡಳಿತದ ಮೇಲೆ ದುಷ್ಪರಿಣಾಮ ಬೀರುವ ಸಾಧ್ಯತೆ ಇದೆ ಎಂಬ ಆತಂಕವನ್ನೂ ಅವರು ವ್ಯಕ್ತಪಡಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಆಪ್ತನಾಗಿ ಪರಿಗಣಿಸಲ್ಪಡುವ ಜಾರಕಿಹೊಳಿ, ಈ ಹಿಂದೆ ಕೂಡ ಪಕ್ಷದ ಹಿರಿಯ ನಾಯಕರನ್ನು ಭೇಟಿ ಮಾಡಿ ಈ ವಿಷಯದಲ್ಲಿ ಮಧ್ಯಪ್ರವೇಶಿಸಲು ಮನವಿ ಮಾಡಿದ್ದರು.

## ಅಪಾರ ಭಕ್ತ ಸಮೂಹದಲ್ಲಿ ಜರುಗಿದ ಶಿವಬೋಧ ಸ್ವಾಮಿಗಳ ಪಲ್ಲಕ್ಕಿ ಉತ್ಸವ



**ಬೆಳಗಾವಿ ವಾರ್ತೆ ಮೂಡಲಗಿ:** ಪಟ್ಟಣದಲ್ಲಿ ಶ್ರೀ ಶಿವಬೋಧ ಸ್ವಾಮಿಗಳ ಆರಾಧನೆಯ ಪಲ್ಲಕ್ಕಿ ಉತ್ಸವವು ಶ್ರೀ ಅಮೃತಬೋಧ ಸ್ವಾಮೀಜಿಗಳ, ಶ್ರೀ ಶ್ರೀಧರ ಸ್ವಾಮೀಜಿಗಳ ಸಾನ್ನಿಧ್ಯದಲ್ಲಿ ರವಿವಾರ ಮೇಲಿನ ಮಠದಿಂದ ಕೆಳಗಿನ ಮಠಕ್ಕೆ ಅಪಾರ ಭಕ್ತ ಸಮೂಹ ಮಧ್ಯೆ ಆಗಮಿಸಿತು. ಶ್ರೀ ಮಠದ ಭಕ್ತರು ಶನಿವಾರ ಮಧ್ಯರಾತ್ರಿ ಇಂದ ರವಿವಾರ ಮುಂಜಾನೆವರಿಗೆ ಸರ್ವ ಧರ್ಮದವರು ತಮ್ಮ ಇಷ್ಟಾರ್ಥ ಈಡೇರಿಸಲಿ ಮತ್ತು ಈಡೇರಿಸಿದಕ್ಕಾಗಿ ದೀರ್ಘದಂಡ ನಮಸ್ಕಾರ ಮತ್ತು ಉರುಳು ಸೇವೆ ಸಲ್ಲಿಸಿದರು. ಮಠದ ಪೀಠಾಪತಿಗಳಾದ ಶ್ರೀ ದತ್ತಾತ್ರಬೋಧ ಸ್ವಾಮೀಜಿಗಳು, ಶ್ರೀ ಶ್ರೀಧರ ಸ್ವಾಮೀಜಿಗಳ ಸಾನ್ನಿಧ್ಯದಲ್ಲಿ ಮೇಲಿನ ಮಠದಲ್ಲಿ ಬೆಳಿಗ್ಗೆಯಿಂದಲೇ ವೇದ ಮಂತ್ರ ಪಟನಗಳೊಂದಿಗೆ ವಿಶೇಷ ಪೂಜೆಗಳು ಜರುಗಿ ಮಧ್ಯಾಹ್ನ 12 ಕ್ಕೆ ಮೇಲಿನ ಮಠದಲ್ಲಿ ಅಲಂಕೃತ ಪಲ್ಲಕ್ಕಿಯಲ್ಲಿ ಶ್ರೀ ಶಿವಬೋಧರಂಗರ ಮೂರ್ತಿಯನ್ನು ಪ್ರತಿಷ್ಠಾಪಿಸಿ ಪೂಜೆ ನೆರವೇರಸಿ ಭಕ್ತ ಸಮೂಹದ ಜಯಘೋಷಣೆ ಹಾಗೂ ವಿವಿಧ ವಾದ್ಯಮೇಳಗಳೊಂದಿಗೆ ಸಡಗರ ಸಂಭ್ರಮದಿಂದ ಜರುಗಿತು. ಭಕ್ತರು ಪಲ್ಲಕ್ಕಿ ಉತ್ಸವದಲ್ಲಿ ಬೆಂಡು ಬೆತಾಸ ಖಾರೀಕ ಸಮರ್ಪಿಸಿ ಪುನೀತರಾದರು.

ಉತ್ಸವದಲ್ಲಿ ಮೂಡಲಗಿ ಪಟ್ಟಣ ಸೇರಿದಂತೆ ಸುತ್ತಮೂತಲ್ಲಿನ ಗ್ರಾಮಗಳ ಭಕ್ತರು ಭಾಗವಹಿಸಿದರು

## ಸಮಸ್ಯೆ ನಡುವೆ ಯಶಸ್ಸು ಕಂಡ ಸಾಧಕರು! ನಿರೀಕ್ಷೆಯಂತೆ ಸಾಧನೆ ಮಾಡಿದ ಕೆಆರ್,ಇ,ಎಸ್ ವಿದ್ಯಾರ್ಥಿಗಳು

**ಬೆಳಗಾವಿ ವಾರ್ತೆ ಮೋಳೆ;** ಬಡತನಕ್ಕೂ ಸಾಧನೆಗೂ ಸಂಬಂಧವಿಲ್ಲ, ಪ್ರತಿಭೆ ಇದ್ದಲ್ಲಿ ಯಶಸ್ಸಿನ ಶಿಖರ ಏರಲು ಖಂಡಿತ ಸಾಧ್ಯ ಎಂಬ ಧ್ಯೇಯೋಕ್ತಿಯನ್ನು ನಿರೂಪಿಸಿದ ವಿದ್ಯಾರ್ಥಿಗಳು ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕಗಳನ್ನು ತೆಗೆದುಕೊಳ್ಳುವುದರ ಮೂಲಕ ಇತರರಿಗೆ ಮಾದರಿಯಾಗಿದ್ದಾರೆ ಎಂದು ಕೆ.ಆರ್.ಈ.ಎಸ್ ಸಂಸ್ಥೆಯ ಉಪಾಧ್ಯಕ್ಷ ಸಂಜಯ ಬಿರಡಿ ಹೇಳಿದರು.

ಅವರು ಕಾಗವಾಡ ತಾಲೂಕಿನ ಐನಾಪೂರ ಪಟ್ಟಣದ ಕೆಆರ್,ಇ,ಎಸ್ ಸಂಯುಕ್ತ ಪದವಿ ಪೂರ್ವ ಮಹಾವಿದ್ಯಾಲಯದಲಿ ಸನ್ 2025-26ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿ ದ್ವಿತಿಯ ವರ್ಷದಲ್ಲಿ ತೇರ್ಗಡೆಗೊಂಡ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಮಾತನಾಡುತ್ತಿದ್ದರು. ಜೀವನದಲ್ಲಿ ಕೊರತೆ ಗಳು ಇರುತ್ತವೆ.ಅವುಗಳನ್ನು ದೂಷಿಸುತ್ತಾ ಅವುಗಳಿಗೆ ಅಗ್ರ ಪ್ರಾತಿನಿಧ್ಯ ನೀಡುವ ಬದಲು ಸಾಧನೆಗೆ ಬೇಕಾದ ತಯಾರಿ ಮಾಡಿಕೊಳ್ಳಬೇಕು. ಇಂಥಹ ಮನಸ್ಥಿತಿ ಇರುವವರೇ ಭವಿಷ್ಯದಲ್ಲಿ ಬೇಕಾದ ಕ್ಷೇತ್ರಗಳಲ್ಲಿ ಸಾಧನೆ ಮಾಡುತ್ತಾರೆ ಎಂಬು ದಕ್ಕೆ ನಮ್ಮ ಶಾಲೆಯ ವಿದ್ಯಾರ್ಥಿಗಳೇ ಸಾಕ್ಷಿ ಎಂದು ಸಂಜಯ ಬಿರಡಿ ಅಭಿಪ್ರಾಯಪಟ್ಟರು.



ಕೆ.ಆರ್.ಈ.ಎಸ್ ಸಂಸ್ಥೆಯ ಅನುದಾನಿತ ಪೌಢ ಶಾಲೆಯ ವಿಭಾಗದಲ್ಲಿ ಐಶ್ವರ್ಯ ಉಮರಾಣಿ ಇವಳು 625ಕ್ಕೆ 618 (ಶೇ.98.88) ಅಂಕಗಳನ್ನು ಪಡೆದು ಶಾಲೆಹಾಗೂ ಕ್ಲಸ್ಟರಗೆ ಪ್ರಥಮ, ಕಾಗವಾಡ ವಲಯಕ್ಕೆ ದ್ವಿತಿಯ ಸ್ಥಾನ ಪಡೆದುಕೊಂಡಿದ್ದಾಳೆ. ಶ್ರೇಯಾ ಪಾಟೀಲ625ಕ್ಕೆ 597(ಶೇ.95.52) ಅಂಕಗಳನ್ನು ಪಡೆದು ದ್ವಿತೀಯ ಸ್ಥಾನ, ಪ್ರೀಯಾ ಕದ್ದು 625ಕ್ಕೆ 572(ಶೇ.91.52) ಅಂಕಗಳನ್ನು ಪಡೆದು ತೃತಿಯ ಸ್ಥಾನ ಪಡೆದುಕೊಂಡಿದ್ದಾಳೆ.

ಕೆ.ಆರ್.ಈ.ಎಸ್ ಸಂಸ್ಥೆಯ ಅನುದಾನರಹಿತ ಪೌಢ ಶಾಲಾ ವಿಭಾಗದಲ್ಲಿ ಸೃಷ್ಟಿ ಖೋತ 625ಕ್ಕೆ 607(ಶೇ,97.12) ಅಂಕ ಪಡೆದು ಪ್ರಥಮ, ಅಂಕಿತಾ ನರೋಟೆ 625ಕ್ಕೆ 605(ಶೇ.96.80) ಅಂಕ ಪಡೆದು ದ್ವಿತೀಯ, ವೈಷ್ಣವಿ ಕಾಗಲಿ 625ಕ್ಕೆ 598 (ಶೇ.95.68) ಅಂಕ ಪಡೆದು ತೃತಿಯ ಸ್ಥಾನ ಪಡೆದುಕೊಂಡಿದ್ದಾಳೆ.

ಕೆ.ಆರ್.ಈ.ಎಸ್ ಸಂಸ್ಥೆಯ ಆಂಗ್ಲ ಮಾಧ್ಯಮ ಪೌಢ ಶಾಲಾ ವಿಭಾಗದಲ್ಲಿ ಪ್ರತೀಕ್ಷಾ ನಾಮದಾರ 625ಕ್ಕೆ 608 (ಶೇ,97.28) ಅಂಕ ಪಡೆದು ಪ್ರಥಮ, ಅಶ್ವಿನಿ ಭಿರಡಿ 625ಕ್ಕೆ 607(ಶೇ,97.12) ಅಂಕ ಪಡೆದು ದ್ವಿತೀಯ, ಸಿದ್ಧಾಂತ ಸತ್ತಿಕರ 625ಕ್ಕೆ 599(ಶೇ.95.84) ಅಂಕ ಪಡೆದು ತೃತಿಯ ಸ್ಥಾನ ಪಡೆದುಕೊಂಡಿದ್ದಾನೆ.

ಕೆ.ಆರ್.ಈ.ಎಸ್ ಸಂಸ್ಥೆಯ ಪಿಯುಸಿ ದ್ವಿತೀಯ ವರ್ಷದ ಕಲಾ ವೀಭಾಗದಲ್ಲಿ ಜ್ಯೋತಿ ಮಾಂಗ 600ಕ್ಕೆ 562(ಶೇ.93.66) ಅಂಕ ಪಡೆದು ಪ್ರಥಮ, ಗಾಯತ್ರಿ ಮಾದರ 600 ಕ್ಕೆ 558(ಶೇ.93) ಅಂಕ ಪಡೆದು ದ್ವೀತಿಯ, ಸೌಮ್ಯ ಸಾಳುಂಕೆ 600ಕ್ಕೆ 551(ಶೇ.91.83) ಅಂಕ ಪಡೆದು ತೃತಿಯ, ವಾಣಿಜ್ಯ ವಿಭಾಗದಲ್ಲಿ ಸವಿತಾ ಹಾಲಾರೊಟ್ಟಿ600ಕ್ಕೆ 585 (ಶೇ.97.50) ಅಂಕ ಪಡೆದು ಪ್ರಥಮ, ಅರ್ಚನಾ ಬ್ರಿಷ್ಠಾಣಿ 600 ಕ್ಕೆ 577(ಶೇ.96.17) ದ್ವಿತೀಯ, ವರ್ಷಾ ಪವಾರ 600ಕ್ಕೆ 576 (ಶೇ.96) ತೃತಿಯ ಸ್ಥಾನ ಪಡೆದು ಸಂಸ್ಥೆಗೆ ಕೀತಿ ತಂದಿದ್ದಾರೆ. ಇವರನ್ನು ಆಡಳಿತ ಮಂಡಳಿಯ ಉಪಾದ್ಯಕ್ಷ ಸಂಜಯ ಭಿರಡಿ, ನಿರ್ದೇಶಕರಾದ ರಾಜೇಂದ್ರ ಪೋತದಾರ, ಪ್ರವೀಣ ಕುಲಕರ್ಣಿ, ಉದಯ ನಿಡಗುಂದಿ ಪ್ರಾಚಾರ್ಯ ಪ್ರೇಮಾನಂದ ಬಿ.ಉಪಪ್ರಾ ಚಾರ್ಯ ಎ.ಎಂ.ಹುಲ್ಲೆನ್ನವರ, ಮುಖ್ಯೋ ಪಾದ್ಯಾಯರಾದ ಎಸ್.ಎ.ಮಿಸಾಳ, ಕೆ.ಎಂ. ಸೋಂದಕರ ವಿವಿಧ ವಿಭಾಗಗಳ ಮುಖ್ಯಸ್ಥರು, ಶಿಕ್ಷರು ಉಪಸ್ಥಿತರಿದ್ದು ಮಾತ ನಾಡಿದರು ವಿದ್ಯಾರ್ಥಿಗಳನ್ನು ಸನ್ಮಾನಿಸಿದರು.

## ಗ್ರಾಮ ಪಂಚಾಯತ ಚುನಾಯಿತ ಸದಸ್ಯರ ಸಂಖ್ಯೆ ಕುರಿತ ಸ್ವೀಕೃತ ಆಕ್ಷೇಪಣೆ ಅಹವಾಲುಗಳ ಅದಾಲತ್ ಮುಂದೂಡಿಕೆ

**ಬೆಳಗಾವಿ ವಾರ್ತೆ ಧಾರವಾಡ:** ಕರ್ನಾಟಕ ರಾಜ್ಯದ ಗ್ರಾಮ ಪಂಚಾಯಿತಿಗಳ ಚುನಾಯಿತ ಸದಸ್ಯ ಸ್ಥಾನಗಳನ್ನು ಪ್ರಕರಣ 5(1) ರಂತೆ ನಿಗದಿಪಡಿಸಿರುವ ಕರಡು ಪ್ರಕಟಣೆಗೆ ಸಾರ್ವಜನಿಕರಿಂದ ಆಕ್ಷೇಪಣೆ, ಅಹವಾಲುಗಳನ್ನು ಸಲ್ಲಿಸುವ ಅವಧಿಯನ್ನು ಮೇ 02, 2026 ರ ಸಂಜೆ 5:30 ಗಂಟೆಯವರೆಗೆ ವಿಸ್ತರಿಸಲಾಗಿದೆ.

ಜಿಲ್ಲೆಗಳ ಗ್ರಾಮ ಪಂಚಾಯಿತಿಗಳ ಚುನಾಯಿತ ಸದಸ್ಯರ ಸಂಖ್ಯೆಯ ಕುರಿತಂತೆ, ಸ್ವೀಕರಿಸಿದ ಆಕ್ಷೇಪಣೆ, ಅಹವಾಲುಗಳನ್ನು ಪರಿಶೀಲಿಸಲು ಏಪ್ರೀಲ್ 27, 2026 ರಂದು ನಿರ್ಧಿಸಿದ್ದ ಪರಿಶೀಲನಾ ಅದಾಲತ್‌ನ್ನು ಮುಂದೂಡಲಾಗಿದ್ದು, ಸದರಿ ಅದಾಲತ್‌ನ್ನು ಮೇ 5, 2026 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 1:30 ಗಂಟೆಯವರೆಗೆ ನಿಗಧಿಪಡಿಸಲಾಗಿದೆ.

ಪರಿಶೀಲನಾ ಅದಾಲತ್ ಸಭೆಯು ಬೆಂಗಳೂರಿನ ಬಹುಮಡಿ ಕಟ್ಟಡದ, ಗೇಟ್ ನಂ:2, 2ನೇ ಮಹಡಿಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖೆಯ ಕಚೇರಿಯಲ್ಲಿ ಜರುಗಲಿದೆ.

ಆಕ್ಷೇಪಣೆ ಮತ್ತು ಅಹವಾಲುಗಳನ್ನು ಸಲ್ಲಿಸಿರುವ ಧಾರವಾಡ ಜಿಲ್ಲೆಯ ಸಾರ್ವಜನಿಕರು ಹಾಗೂ ಇತರರು ಅದಾಲತ್‌ನಲ್ಲಿ ಭಾಗವಹಿಸಲು ಇಚ್ಛಿಸಿದಲ್ಲಿ ತಮ್ಮ ಆಧಾರ್ ಅಥವಾ ಗುರುತಿನ ಚೀಟಿ ಅಥವಾ ಸರ್ಕಾರದಿಂದ ನೀಡಿರುವ ಭಾವಚಿತ್ರವುಳ್ಳ ಯಾವುದೇ ಗುರುತಿನ ಚೀಟಿಯ ಪ್ರತಿಯನ್ನು ತಮ್ಮೊಂದಿಗೆ ಕಡ್ಡಾಯವಾಗಿ ತರಬೇಕು ಎಂದು ಕರ್ನಾಟಕ ಪಂಚಾಯತ ರಾಜ್ ಸೀಮಾ ನಿರ್ಣಯ ಆಯೋಗದ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾಹಿತಿ ಸತೀಶ್ ಕುಲಕರ್ಣಿ ಅವರಿಗೆ ಡಾಕ್ಟರೇಟ್ ಪದವಿ; ಸನ್ಮಾನ



**ಬೆಳಗಾವಿ ವಾರ್ತೆ ಹುಬ್ಬಳ್ಳಿ :** ಹಾವೇರಿಯ ಖ್ಯಾತ ಸಾಹಿತಿ ಸತೀಶ್ ಕುಲಕರ್ಣಿ ಅವರಿಗೆ ಸಾಹಿತ್ಯ ಕ್ಷೇತ್ರದಲ್ಲಿಯ ಸಾಧನೆ ಗುರುತಿಸಿ ಹಾವೇರಿ ವಿಶ್ವವಿದ್ಯಾಲಯ ಗೌರವ ಡಾಕ್ಟರೇಟ್ ನೀಡಿ ಗೌರವಿಸಿದ್ದಕ್ಕೆ ಡಾ ಸತೀಶ್ ಕುಲಕರ್ಣಿ ಅವರಿಗೆ ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ, ಬಸವ ಪರಿಸರ ಸಂರಕ್ಷಣಾ ಸಮಿತಿಯ ವತಿಯಿಂದ ಮಾಲಾರ್ಪಣೆ ಮಾಡಿ, ಗ್ರಂಥ ನೀಡಿ ಗೌರವ ಪೂರ್ವಕವಾಗಿ ಹೆಮ್ಮೆ, ಅಭಿಮಾನದಿಂದ ಸನ್ಮಾನಿಸಿದರು. ಹುತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸಿದರು. ಶುಭಾಶಯು ಕೋರಿದರು.

ಓಡುವ ಗಡಿಯಾರ ಕೃತಿಯ ಲೇಖಕಿ, ಆತ್ಮೀಯರಾದ ಗಾಯತ್ರಿ ರವಿ ಅವರಿಗೆ ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ, ಬಸವ ಪರಿಸರ ಸಂರಕ್ಷಣಾ ಸಮಿತಿಯ ವತಿಯಿಂದ ಮಾಲಾರ್ಪಣೆ ಮಾಡಿ, ಗ್ರಂಥ ನೀಡಿ ಗೌರವ ಪೂರ್ವಕವಾಗಿ ಹೆಮ್ಮೆ, ಅಭಿಮಾನದಿಂದ ಸನ್ಮಾನಿಸಿದರು. ಹುತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸಿದರು. ಶುಭಾಶಯ ಕೋರಿದರು.

ಗಾಯತ್ರಿ ರವಿ ಅವರು ಗೋಕುಲ ರಸ್ತೆ, ಉದ್ಯಮ ನಗರ ಅಂಚೆ ಕಛೇರಿಯಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಮಂಜಿನ ಹನಿಗಳು ಕುರುಡನಿಗೆ ಕನ್ನಡಿ ಹಾಗೂ ಓಡುವ ಗಡಿಯಾರ ಮೂರು ಸಂಕಲನಗಳು, ಶಶುನ ಸೈಕಲ್ ಎಂಬ ಪ್ರಬಂಧ ಸಂಕಲನ ಪ್ರಕಟಗೊಂಡಿದೆ. ಸೋಹನ ಸುರೇಶ ಹೊರಕೇರಿ, ಸುಜಯ ಸುರೇಶ ಹೊರಕೇರಿ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಕಾರ್ಯದರ್ಶಿ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯದರ್ಶಿ, ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ಜಿಲ್ಲಾ ಘಟಕದ ಉಪಾಧ್ಯಕ್ಷ, ಕರ್ನಾಟಕ ವಚನ ಸಾಹಿತ್ಯ ಪರಿಷತ್‌ನ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ, ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ ಟ್ರಸ್ಟಿ, ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ, ಪ್ರಾಚಾರ್ಯ ಡಾ ಮಹೇಶ ಡಿ. ಹೊರಕೇರಿ, ಲೇಖಕಿ ಪದ್ಮಜಾ ಉಮರ್ಜಿ ಸರೋಜಾ ಮೇಟಿ, ನಂದಾ ಕುಲಕರ್ಣಿ, ಸಿ ಎಂ ಚನ್ನಬಸಪ್ಪ , ಶಶಾಂಕ್ , ರವಿ, ಸಾಹಿತಿಗಳು, ಕವಿಗಳು, ಮುಂತಾದವರು ಇದ್ದರು.

## ಮಾಹಿತಿ ಹಕ್ಕು ಜನಪರ ಕಾಯ್ದೆ: ಆಯುಕ್ತ ಚನ್ನಾಳ

### ಬೆಳಗಾವಿ ಪೀಠ: ವಾರ್ಷಿಕ 7 ಸಾವಿರ ಅರ್ಜಿಗಳ ಇತ್ಯರ್ಥಕ್ಕೆ ಗುರಿ



**ಬೆಳಗಾವಿ ವಾರ್ತೆ ಬೆಳಗಾವಿ:** "ಮಾಹಿತಿ ಹಕ್ಕು ಕಾಯ್ದೆ ಜನಪರ ಮತ್ತು ಪ್ರಜಾಪ್ರಭುತ್ವದ ಭದ್ರ ಬುನಾದಿಯಾಗಿದೆ. ಸ್ವತಂತ್ರ ಭಾರತದಲ್ಲಿ ಅತ್ಯಂತ ಕ್ರಾಂತಿಕಾರಕ ಕಾಯ್ದೆಯಾಗಿದೆ. ಸಾಮಾನ್ಯ ಜನರಿಗೆ ಸರ್ಕಾರದ ಮಾಹಿತಿ ಸುಲಭವಾಗಿ ತಲುಪಬೇಕೆಂಬ ಉದ್ದೇಶ ದಿಂದ ಮಾಹಿತಿ ಹಕ್ಕು ಕಾಯ್ದೆಯು 2005 ರ ಅಕ್ಟೋಬರ್ 12 ರಂದು ಜಾರಿಗೆ ಬಂದಿರುತ್ತದೆ. ಕರ್ನಾಟಕ ರಾಜ್ಯವು ಈ ಕಾಯ್ದೆಯನ್ನು ಅನುಷ್ಠಾನ ಗೊಳಿಸಿದ ಪ್ರಥಮ ರಾಜ್ಯ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ" ಎಂದು ಕರ್ನಾಟಕ ಮಾಹಿತಿ ಆಯೋಗದ ಬೆಳಗಾವಿ ಪೀಠದ ರಾಜ್ಯ ಮಾಹಿತಿ ಆಯುಕ್ತರಾದ ಪ್ರಕಾಶ ನಾರಾಯಣ ಚನ್ನಾಳರವರು ತಿಳಿಸಿದ್ದಾರೆ. ಕರ್ನಾಟಕ ಮಾಹಿತಿ ಹಕ್ಕು ಆಯೋಗವು ಕಳೆದ ಒಂದು ವರ್ಷದಲ್ಲಿ ರಾಷ್ಟದಲ್ಲಿಯೇ ದಾಖಲೆ ಪ್ರಮಾಣದಲ್ಲಿ 40 ಸಾವಿರ ದ್ವಿತಿಯ ಮೇಲ್ಮನವಿ ಪ್ರಕರಣಗಳನ್ನು ಇತ್ಯರ್ಥ ಮಾಡಿದೆ. ಕರ್ನಾಟಕ ಮಾಹಿತಿ ಆಯೋಗ ಬೆಳಗಾವಿ ಪೀಠದಲ್ಲಿ ಪ್ರತಿದಿನ ಸುಮಾರು 40–60 ಅರ್ಜಿಗಳ ವಿಚಾರಣೆ ಆಫ್‌ಲೈನ್ ಮತ್ತು ಆನ್‌ಲೈನನಲ್ಲಿ ನಡೆಯುತ್ತಿದ್ದು. ಗ್ರಾಮೀಣ ಭಾಗದ ಜನರ ಅರ್ಜಿಗಳಿಗೆ ಹೆಚ್ಚಿನ ಒತ್ತು ನೀಡಿ ಗ್ರಾಮೀಣ ಭಾಗದ ಸಮಸ್ಯೆಗಳಾದ ಕುಡಿಯುವ ನೀರು, ರಸ್ತೆ, ವಿದ್ಯುತ್ ಸರಬರಾಜು, ಸ್ವಚ್ಛತೆ, ಆರೋಗ್ಯ ಮತ್ತು ಇತ್ಯಾದಿ ಮೂಲ ಸೌಕರ್ಯಗಳ ಸಮಸ್ಯೆಗಳ ವಿಚಾರಣೆಗಳು ಇತ್ಯರ್ಥವಾಗುತ್ತಿದ್ದು, ಮಾಹಿತಿ ನೀಡದೇ ಇರುವ ಅಧಿಕಾರಿಗಳಿಗೆ ಕಡ್ಡಾಯವಾಗಿ ಮಾಹಿತಿ ನೀಡಲು ಶಿಸ್ತು ಕ್ರಮ ಜರುಗಿಸಿ, ವಿಚಾರಣೆ ಸಮಿತಿಯ ಶಿಫಾರಸ್ಸು, ದಂಡ ಮತ್ತು ಅರ್ಜಿದಾರರಿಗೆ ಪರಿಹಾರದ ಆದೇಶಗಳನ್ನು ಮಾಡುತ್ತಿದ್ದಾರೆ ಎಂದು ತಿಳಿಸಿದ್ದಾರೆ.

ಬೆಳಗಾವಿ ಪೀಠಕ್ಕೆ ಬರುವ ಅರ್ಜಿಗಳ ಪ್ರಮಾಣ ಹೆಚ್ಚಳ ಇದ್ದುದ್ದರಿಂದ ವರ್ಷಕ್ಕೆ 6000 ರಿಂದ 7000 ವಿಚಾರಣೆಗಳ ಇತ್ಯರ್ಥಕ್ಕಾಗಿ ಯೋಜನೆಯನ್ನು ಹಾಕಿಕೊಳ್ಳಲಾಗಿದೆ ಮತ್ತು ಜಿಲ್ಲಾವಾರು ಕಾರ್ಯಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸತ್ಸಂಗದ ದಾರಿ ತೋರಿಸುವವನೇ ಗುರು: ಹೊಸಳ್ಳಿಯ ಅಭಿನವ ಬೂದೀಶ್ವರ ಸ್ವಾಮಿಜಿ

**ವರದಿ: ಅಡಿವೇಶ ಮುಧೋಳ.**

**ಬೆಳಗಾವಿ ವಾರ್ತೆ ಬೆಟಗೇರಿ:** ಮನುಷ್ಯ ಜನ್ಮ ಶ್ರೇಷ್ಠವಾಗಿದೆ. ಒಳ್ಳೆಯವನಾಗಿ ಒಳ್ಳೆಯ ಕಾಯಕ ಮಾಡಿ, ಭಗವಂತನ ನಾಮಸ್ಮರಣೆ ಮಾಡಿದರೆ ಅದೇ ಸತ್ಸಂಗ. ಎಲ್ಲವನ್ನು ನಮಗೆ ಕೊಟ್ಟ ಭಗವಂತನನ್ನು ಎಂದಿಗೂ ಮರೆಯಬಾರದು ಎಂದು ಹೊಸಳ್ಳಿ ಅಭಿನವ ಬೂದೀಶ್ವರ ಸ್ವಾಮಿಜಿ ಹೇಳಿದರು.

ಗೋಕಾಕ ತಾಲೂಕಿನ ಬೆಟಗೇರಿ ಗ್ರಾಮಸ್ಥರ ಸಹಯೋಗದಲ್ಲಿ ಬಸವ ಜಯಂತಿ ಹಾಗೂ 775 ವರ್ಷ ಬಾಳಿದ ಹೊಸಳ್ಳಿ ಮಹಾತಪಸ್ವಿ ಜಗದ್ಗುರು ಬೂದೀಶ್ವರ ಮಹಾಶಿವಯೋಗಿಗಳ ಶಿಲಾ ಮಂಟಪ ಲೋಕಾರ್ಪಣೆ ನಿಮಿತ್ಯ ಬೆಟಗೇರಿ ಗ್ರಾಮದಲ್ಲಿ ಪ್ರಪ್ರಥಮವಾಗಿ ಇದೇ ಏ.26ರಿಂದ ಏ.30ರವರೆಗೆ ಹೊಸಳ್ಳಿ ಮತ್ತು ಕೊಪ್ಪಳ ಶ್ರೀಗಳಿಂದ ಹಮ್ಮಿಕೊಂಡ ಆಧ್ಯಾತ್ಮಿಕ ಪ್ರವಚನ ಕಾರ್ಯಕ್ರಮದಲ್ಲಿ ಏ.26ರಂದು ಸ್ಥಳೀಯ ಶ್ರೀ ಗಜಾನನ ವೇದಿಕೆ ಮೇಲೆ ನಡೆದ ಪ್ರವಚನದಲ್ಲಿ ಮಾತನಾಡಿದ ಅವರು, ಸದ್ಗುರು ಯಾವಾಗಲೂ ದೊಡ್ಡವನು, ಗುರು ಸತ್ಸಂಗದ ದಾರಿ ತೋರಿಸುತ್ತಾನೆ ಎಂದರು.

ಗುರುವಿನ ಗುಲಾಮನಾಗುವ ತನಕ ದೊರೆಯದನ್ನ ಮುಕುತಿ. ಸದ್ಗುರುವಿನ ಉಪದೇಶ ಕೇಳಬೇಕು. ಗುರುವಿನ ಸೇವೆ ಮಾಡಬೇಕು. ಹರ ಮುನಿದರೂ ಸಹ ಗುರು ಕಾಯುತ್ತಾನೆ. ಒಳ್ಳೆಯ ಮನಸ್ಸಿನಿಂದ ಶಿವನಾಮಸ್ಮರಣೆ ಮಾಡಿದರೆ ಭಗವಂತನ ಕೃಪೆಗೆ ಪಾತ್ರರಾಗುತ್ತಾರೆ. ಹಲವಾರು ಜನ ಮಹಾನ್ ಯೋಗಿಗಳು, ಸತ್ಪುರುಷರು, ಹರ, ಗುರು, ಚರಮೂರ್ತಿಗಳು ಈ ಬೆಟಗೇರಿ ನೆಲದಲ್ಲಿ ಪಾದಸ್ಪರ್ಶ ಮಾಡಿದ್ದರಿಂದ ಇಲ್ಲಿ ಸದಾ ಆಧ್ಯಾತ್ಮದ ಕಂಪು ಸೂಸುತ್ತಿದೆ. ಇಲ್ಲಿ ಜರುಗುವ ಹಲವಾರು ಧಾರ್ಮಿಕ ಕಾರ್ಯಗಳಿಗೆ ಸ್ಥಳೀಯರು ನೀಡುತ್ತಿರುವ ಸಹಾಯ, ಸಹಕಾರ ಮೆಚ್ಚುವಂತದ್ದಾಗಿದೆ ಎಂದು ಹೊಸಳ್ಳಿ ಅಭಿನವ ಬೂದೀಶ್ವರ ಸ್ವಾಮಿಜಿ ಅಭಿಪ್ರಾಯ ಪಟ್ಟರು.

ಏ.26 ರಂದು ಸಾಯಂಕಾಲ 5 ಗಂಟೆಗೆ ಸ್ಥಳೀಯ ಅಡವಿಸಿದ್ಧೇಶ್ವರ ದೇವಸ್ಥಾನದಿಂದ ಶ್ರೀ ಗಜಾನನ ವೇದಿಕೆ ತನಕ ಸುಮಂಗಲೆಯರಿಂದ ಆರತಿ ಮತ್ತು ಕುಂಭಮೇಳ, ಸಕಲ ವಾದ್ಯಮೇಳಗಳೊಂದಿಗೆ ಹೊಸಳ್ಳಿ ಅಭಿನವ ಬೂದೀಶ್ವರ ಸ್ವಾಮಿಜಿ ಅವರ ಸ್ವಾಗತ ಮೆರವಣಿಗೆ ಜರುಗಿತು.

ಮಲ್ಲಿಕಾರ್ಜುನ ಕೊಡಗನೂರ ಅವರಿಂದ ತಬಲಾ ಸಾಥದೊಂದಿಗೆ ಕಲ್ಲೂರದ ಶಂಕರಯ್ಯ ಗುರುಮಠ ಅವರಿಂದ ಸಂಗೀತ ಸೇವೆ, ಹೊಸಳ್ಳಿಯ ಅಭಿನವ ಬೂದೀಶ್ವರ ಸ್ವಾಮಿಜಿ ಅವರಿಂದ ಪ್ರವಚನ ನಡೆದ ಬಳಿಕ ಅನ್ನದಾತ ನೇಗಿಲಯೋಗಿ ಮತ್ತು ದೇಶ ಕಾಯುವ ಸೈನಿಕರಿಗೆ ದೇವರು ಸದಾ ಶಕ್ತಿ ಸಾಮರ್ಥ್ಯ ನೀಡಲಿ ಎಂದು ಒಂದು ನಿಮಿಷ ಮೌನ ಧ್ಯಾನ ಮಾಡಲಾಯಿತು.



**ಹೊಸಳ್ಳಿ ಮತ್ತು ಕೊಪ್ಪಳ ಶ್ರೀಗಳಿಂದ ಪ್ರವಚನ :** ಗೋಕಾಕ ತಾಲೂಕಿನ ಬೆಟಗೇರಿ ಗ್ರಾಮದಲ್ಲಿ ಏ.28 ಮತ್ತು ಏ.29 ರಂದು ಹೊಸಳ್ಳಿ ಅಭಿನವ ಬೂದೀಶ್ವರ ಸ್ವಾಮಿಜಿ ಅವರಿಂದ ಪ್ರತಿ ದಿನ ಸಾಯಂಕಾಲ 7 ಗಂಟೆಯಿಂದ 8 ಗಂಟೆಯವರೆಗೆ ವಿವಿಧ ವಿಷಯಗಳ ಮೇಲೆ ಸ್ಥಳೀಯ ಶ್ರೀ ಗಜಾನನ ವೇದಿಕೆ ಮೇಲೆ ಪ್ರವಚನ, ಏ.30 ರಂದು ಪ್ರವಚನ ಮಂಗಲ ಕಾರ್ಯಕ್ರಮ, ಮುಂಜಾನೆ 8 ಗಂಟೆಗೆ ಗ್ರಾಮದ ವಿವಿಧ ಬೀದಿಗಳಲ್ಲಿ ಬಳಗಾನೂರದ ಶಿವಶಾಂತವೀರ ಶರಣರಿಂದ ಶಿವಭಜನೆ ಮೂಲಕ ಪಾದಯಾತ್ರೆ, ಮುಂಜಾನೆ 10 ಗಂಟೆಗೆ ಕೊಪ್ಪಳ ಗವಿಸಿದ್ಧೇಶ್ವರ ಮಠದ ಅಭಿನವ ಗವಿಸಿದ್ಧೇಶ್ವರ ಸ್ವಾಮೀಜಿ ಅವರ ದಿವ್ಯಸಾನಿಧ್ಯದಲ್ಲಿ ಸ್ಥಳೀಯ ವಿವಿಡಿ ಸರಕಾರಿ ಪ್ರೌಢ ಶಾಲೆಯ ಆವರಣದಲ್ಲಿ ಆಧ್ಯಾತ್ಮಿಕ ಪ್ರವಚನ ಜರುಗಲಿದೆ ಎಂದು ಹೊಸಳ್ಳಿ ಮತ್ತು ಕೊಪ್ಪಳ ಶ್ರೀಗಳ ಪ್ರವಚನ ಆಯೋಜನೆ ಸ್ಥಳೀಯ ಸಮಿತಿ ಪ್ರಕಟನೆಯಲ್ಲಿ ತಿಳಿಸಿದೆ.

ಬಸವಂತ ಕೋಣಿ, ಈಶ್ವರ ಬಳಿಗಾರ, ಶ್ರೀಧರ ದೇಯಣ್ಣವರ, ಬಸವರಾಜ ಪಣದಿ, ಈರಯ್ಯ ಹಿರೇಮಠ, ಸಂಗಯ್ಯ ಹಿರೇಮಠ, ಎಂ.ಐ.ನೀಲಣ್ಣವರ, ದುಂಡಪ್ಪ ಮಾಳೇದ, ಮಲ್ಲಪ್ಪ ಪಣದಿ, ಬಾಳಪ್ಪ ಕನೋಜಿ, ನಿಂಗಪ್ಪ ಕಂಬಿ, ದುಂಡಪ್ಪ ಕಂಬಿ, ಯಲ್ಲಪ್ಪ ಮೇಳೆಣ್ಣವರ, ಸುರೇಶ ನೀಲಣ್ಣವರ, ಭೀಮನಾಯ್ಕ ನಾಯಕರ, ಭರಮಣ್ಣ ಪೂಜೇರ, ಸೇರಿದಂತೆ ಸ್ಥಳೀಯ ಹಾಗೂ ಸುತ್ತಲಿನ ಹಳ್ಳಿಗಳ ಹರ, ಗುರು, ಚರಮೂರ್ತಿಗಳು, ಸಂತ, ಶರಣರು, ಕೊಪ್ಪಳ ಮತ್ತು ಹೊಸಳ್ಳಿ ಶ್ರೀಗಳ ಪ್ರವಚನ ಆಯೋಜನೆ ಸಮಿತಿ ಪದಾಧಿಕಾರಿಗಳು, ಸದಸ್ಯರು, ಅಪಾರ ಸಂಖ್ಯೆಯಲ್ಲಿ ಭಕ್ತ ಜನ ಸಮೂಹ ಈ ಪ್ರವಚನ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

## ಗ್ರಾ.ಪಂ ಸದಸ್ಯರ ಸ್ಥಾನ ಕರಡು ಪ್ರಕಟಣೆ ಆಕ್ಷೇಪಣೆ ಸಲ್ಲಿಕೆಗೆ ಅವಧಿ ವಿಸ್ತರಣೆ

**ಬೆಳಗಾವಿ ವಾರ್ತೆ ಬಾಗಲಕೋಟೆ:** ಕರ್ನಾಟಕ ರಾಜ್ಯದ ಗ್ರಾಮ ಪಂಚಾಯತಿಗಳ ಚುನಾಯಿತ ಸದಸ್ಯ ಸ್ಥಾನಗಳನ್ನು ಪ್ರಕರಣ 5(1) ರಂತೆ ನಿಗದಿಪಡಿಸಿರುವ ಕರಡು ಪ್ರಕಟಣೆಗೆ ಸಾರ್ವಜನಿಕರಿಂದ ಆಕ್ಷೇಪಣೆಯನ್ನು ಸಲ್ಲಿಸುವ ಅವಧಿಯನ್ನು ಮೇ 2ರ ಸಂಜೆ 5.30 ವರೆಗೆ ವಿಸ್ತರಿಸಲಾಗಿದೆ. ಮುಂದಿವರೆದು ರಾಜ್ಯ 31 ಜಿಲ್ಲೆಗಳ ಗ್ರಾಮ ಪಂಚಾಯತಿಗಳ ಚುನಾಯಿತ ಸದಸ್ಯರ ಸಂಖ್ಯೆಯ ಕುರಿತಂತೆ ಸ್ವೀಕರಿಸಿದ ಆಕ್ಷೇಪಣೆ, ಅಹವಾಲುಗಳ ಬಗ್ಗೆ ನಿಗದಿಪಡಿಸಿದ ದಿನಾಂಕ ಎಪ್ರೀಲ್ 27ಪರಿಶೀಲನಾ ಅದಾಲತ್‌ನ್ನು ಮುಂದೂಡಲಾಗಿದೆ.

ಮುಂದಿನ ಪರಿಶೀಲನಾ ಅದಾಲತ್‌ನ್ನು ಮೇ 5 ರಂದು ಬೆಳಿಗ್ಗೆ 11 ರಿಂದ ಮದ್ಯಾಹ್ನ 1.30 ವರೆಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖೆ, ಗೇಟ್ ನಂ.2, 2ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು–560001 ಇಲ್ಲಿ ನಡೆಯಲಿದೆ. ಜಿಲ್ಲೆಯಿಂದ ಆಕ್ಷೇಪಣೆ ಮತ್ತು ಅಹವಾಲುಗಳನ್ನು ಸಲ್ಲಿಸಿದವರು ಅದಾಲತ್‌ನಲ್ಲಿ ಭಾಗವಹಿಸಲು ಇಚ್ಛಿಸಿದಲ್ಲಿ ತಮ್ಮ ಆಧಾರ ಅಥವಾ ಗುರುತಿನ ಚೀಟಿ ಇಲ್ಲವೇ ಸರ್ಕಾರದಿಂದ ನೀಡಿರುವ ಭಾವಚಿತ್ರವುಳ್ಳ ಯಾವುದೇ ಗುರುತಿನ ಚೀಟಿಯ ಪ್ರತಿಯನ್ನು ತಮ್ಮೊಂದಿಗೆ ಕಡ್ಡಾಯವಾಗಿ ತರತಕ್ಕದ್ದೆಂದು ಕರ್ನಾಟಕ ಪಂಚಾಯತ ರಾಜ್ ಸೀಮಾ ನಿರ್ಣಯ ಆಯೋಗದ ಸದಸ್ಯ ಕಾರ್ಯದರ್ಶಿ ಡಾ.ಎನ್.ನೋಮೇಶ್ ಕುಮಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗೋ ರಕ್ಷಣೆ ಮತ್ತು ರಾಷ್ಟ್ರೀಯ ಪ್ರಾಣಿ ಎಂದು ಘೋಷನೆಗೆ ಆಗ್ರಹಿಸಿ ಮನವಿ



**ಬೆಳಗಾವಿ ವಾರ್ತೆ ಮೂಡಲಗಿ:** ದೇಶಾದ್ಯಂತ ಹಮ್ಮಿಕೊಂಡಿರುವ ಗೋಮಾತೆಯ ಗೌರವದ ಅಭಿಯಾನದ ಹಿನ್ನಲೇ ಸೋಮವಾರ ಗೋ ಭಕ್ತರು ಮೂಡಲಗಿ ತಹಶೀಲ್ದಾರ ಮೂಲಕ ರಾಷ್ಟ್ರಪತಿಗಳಿಗೆ, ಪ್ರದಾನ ಮಂತ್ರಿಗಳಿಗೆ, ರಾಜ್ಯದ ರಾಜ್ಯಪಾಲರಿಗೆ ಮತ್ತ ಮುಖ್ಯಮಂತ್ರಿಗಳಿಗೆ ಗೋ ಗೋಹತ್ಯೆಯನ್ನು ಸಂಪೂರ್ಣವಾಗಿ ನಿಲ್ಲಿಸಲು, ರಾಷ್ಟ್ರೀಯ ಪ್ರಾಣಿ ಮತ್ತು ಎಪ್ರಿಲ್ 27 ರಂದು ಗೋಮಾತಾ ಗೌರವ ದಿನ ಘೋಷನೆಗೆ ಆಗ್ರಹಿಸಿ ಗೋ ಭಕ್ತರ ಸಹಿ ಸಂಗ್ರಹ ಪತ್ರದೊಂದಿಗೆಮನವಿ ಅರ್ಪಿಸಲಾಯಿತು.

ಹಿಂದೂ ಸಂಘಟನೆಯ ಮುಖಂಡ ಬಸು ಪಡ್ತರಿ ಮಾತನಾಡಿ, ಭಾರತೀಯ ಸಂಸ್ಕೃತಿ, ಆರ್ಥಿಕತೆ, ಮಾಣವ ಆರೋಗ್ಯ, ವಿಷಮುಕ್ತ ಕೃಷಿ ಮತ್ತು ಪರಿಸರಸಮತೋಲನದಲ್ಲಿ ಹಸುವಿನ ಸ್ಥಾನವು ಅತ್ಯಂತ ಮಹತ್ವದ್ದಾಗಿದೆ, ಶತಮಾನಗಳಿಂದಲೂ ಗೋ–ವಂಶವು ಭಾರತೀಯ ಪರಂಪರೆಯ ಜೀವನಾಡಿಯಾಗಿದೆ. ಪ್ರಸ್ತುತ ಪರರಿಸ್ಥಿಯಲ್ಲಿ ಗೋವಿಗೆ ಸರಿಯಾದ ಸಂರಕ್ಷಣೆ ಮತ್ತು ಉತ್ತೇಜನದ ಕೊರತೆಯಿಂದಾಗಿ ಗೋ–ವಂಶದ ಸ್ಥಿತಿ ಶೋಚನೀಯವಾಗಿ. ಭಾರತ ಭೂಮಿಯಲ್ಲಿ ಎಲ್ಲ ಗೊ–ವಂಶಗಳು ಆರೋಗ್ಯಕರವಾಗಿ, ಸಂತೋಷವಾಗಿ, ಗೌರವಯುತವಾಗಿ ಮತ್ತು ಸುರಕ್ಷಿತವಾಗಿರಲು ಕೇಂದ್ರ ಮತ್ತು ರಾಜ್ಯ ಸರ್ಕಾರ ಗೋ ಹತ್ಯೆ ನಿಷೇದ ಕಾನೂನು ಮತ್ತು ಗೋವಮಾತ ದಿನ ಘೋಷನೆ ಮಾಡಬೇಕೆಂದು ಆಗ್ರಹಿಸಿದರು.

ಗೋಕಾಕ ಹಿಂದೂ ಜಾಗರಣ ವೇದಿಕೆ ಸಂಚಾಲಕ ಅಂಕುಶ ರೇಣುಕಿ, ಶ್ರೀರಾಮ ಸೇನಾ ಗೋಕಾಕ ತಾಲೂಕ ಅಧ್ಯಕ್ಷ ಸಂಜು ಬಾಗೇವಾಡಿ, ಸಂಘಟನೆ ಕಾರ್ಯದರ್ಶಿ ನಂದು ಗರೀಬ, ಮೂಡಲಗಿ ತಾಲೂಕಾ ಬಜರಂಗ ದಳ ಪ್ರಮುಖರಾದ ಮಾಂತೇಶ ಮುಗಳಖೋಡ, ದುಂಡಪ್ಪ ಹಳ್ಳೂರ, ರಜನಿಕಾಂತ ನಾಯಿಕ, ಸಂದೀಪ ಸಾನವಾಲೆ, ಕೃಷ್ಣಾ ಸಾನವಾಲೆ, ಸಚೀನ ಸಾನವಾಲೆ, ಮೂಡಲಗಿ ತಾಲೂಕಾ ವಿ.ಎಚ್.ಪಿ ಧರ್ಮ ರಕ್ಷಕ ದಾನು ತಂಬೂರಿ ಸೇರಿದಂತೆ ಅನೇಕ ಹಿಂದು ಸಂಘಟನೆಯ ಕಾರ್ಯಕರ್ತರು ಮತ್ತು ಗೋ ಭಕ್ತರು ಇದ್ದರು.

## ಹಸ್ತಪ್ರತಿಗಳ ಸಂರಕ್ಷಣೆ ಮತ್ತು ಡಿಜಿಟಲೀಕರಣ ತಂತ್ರಜ್ಞಾನಗಳ ಮೂಲಕ ಸಾಂಸ್ಕೃತಿಕ ಪರಂಪರೆಯ ಶಾಶ್ವತ ರಕ್ಷಣೆಗೆ ಕ್ರಮ



**ಬೆಳಗಾವಿ ವಾರ್ತೆ ಗದಗ:** ಕೇಂದ್ರ ಸರ್ಕಾರದ ಜ್ಞಾನ ಭಾರತಂ ಮಿಷನ್ ಯೋಜನೆಯಡಿಯಲ್ಲಿ ರಾಷ್ಟ್ರದಾದ್ಯಂತ ಲಭ್ಯವಿರುವ ಶತಮಾನಗಳಷ್ಟು ಹಳೆಯ ಕೈ ಬರಹದ ಪತ್ಯಗಳು, ಹಸ್ತಪ್ರತಿಗಳು ಮತ್ತು ದಾಖಲೆಗಳನ್ನು ಇಂದಿನ ತಂತ್ರಜ್ಞಾನ ಮೂಲಕ ಶಾಶ್ವತವಾಗಿ ಉಳಿಸಲು ಹಸ್ತಪ್ರತಿಗಳ ಸಂರಕ್ಷಣೆ ಹಾಗೂ ಡಿಜಿಟಲೀಕರಣ ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಸಂಜೆ ಜರುಗಿದ ಜ್ಞಾನ ಭಾರತಂ ಮಿಷನ್ ಯೋಜನೆಯಡಿಯಲ್ಲಿ ಹಸ್ತಪ್ರತಿಗಳ ಸಂರಕ್ಷಣೆ ಮತ್ತು ಡಿಜಟಲೀಕರಣ ಕಾರ್ಯಯೋಜನೆ ಕುರಿತು ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಇಡೀ ದೇಶದಲ್ಲಿರುವ ಹಸ್ತಪ್ರತಿಗಳ ಮಾಹಿತಿಯನ್ನು ಕೇಂದ್ರ ಸರ್ಕಾರವು ಅಭಿವೃದ್ಧಿಪಡಿಸಿರುವ ಮೊಬೈಲ್ ಅಪ್ಲಿಕೇಷನ್‌ನಲ್ಲಿ ಅಪ್‌ಲೋಡ್ ಮಾಡುವ ಮೂಲಕ ಸಂಗ್ರಹಣೆಗೊಳ್ಳುವ ಹಸ್ತಪ್ರತಿಗಳ ರಾಷ್ಟ್ರೀಯ ಭಂಡಾರದ ದತ್ತಾಂಶದ ಮಾಹಿತಿಯನ್ನು ವಿಶ್ವಕ್ಕೆ ಹಂಚಿಕೊಳ್ಳುವ ಉದ್ದೇಶದಿಂದ ಈ ಯೋಜನೆ ಜಾರಿಗೊಳಿಸಲಾಗಿದೆ ಎಂದರು.

ರಾಷ್ಟ್ರದಾದ್ಯಂತ ಲಭ್ಯವಿರುವ ಶತಮಾನಗಳಷ್ಟು ಹಳೆಯ ಕೈ ಬರಹದ ಪತ್ಯಗಳು, ಹಸ್ತಪ್ರತಿಗಳು ಮತ್ತು ದಾಖಲೆಗಳ ಇಂದಿನ ತಂತ್ರಜ್ಞಾನ ಮೂಲಕ ಶಾಶ್ವತವಾಗಿ ಉಳಿಸಲು ಇವುಗಳ ಸಮೀಕ್ಷೆ, ಸಂರಕ್ಷಣೆ , ರಕ್ಷಣೆ, ಡಿಜಿಟಲೀಕರಣ, ನೋಂದಣಿ, ವಿಮರ್ಶಾತ್ಮಕ ಸಂಪಾದನೆ , ಅನುವಾದ ಮತ್ತು ಪ್ರಕಟಣೆಯನ್ನು ಮಾಡುವ ಮೂಲಕ ಕರ್ನಾಟಕದ ಶ್ರೀಮಂತ ಸಾಂಸ್ಕೃತಿಕ ಪರಂಪರೆಯನ್ನು ಒಂದೇ ರಾಷ್ಟ್ರೀಯ ವೇದಿಕೆಯ ಮೂಲಕ ಸಾರ್ವಜನಿಕ ಪ್ರವೇಶವನ್ನು ಒದಗಿಸಿ ಭವಿಷ್ಯದ ಪೀಳಿಗೆಗೆ ಅವುಗಳ ಜ್ಞಾನ ಸಂಪತ್ತಿನ ಸಂರಕ್ಷಣೆ ಮತ್ತು ಬಳಕೆಯ ಉದ್ದೇಶ ಹೊಂದಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಹೇಳಿದರು.

ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕ ಕೊಟ್ರೇಶ್ವರ ವಿಭೂತಿ ಮಾತನಾಡಿ ಜ್ಞಾನ ಭಾರತಂ ಮಿಷನ್ ಯೋಜನೆಯೊಂದಿಗೆ ರಾಜ್ಯ ಸರ್ಕಾರವು ಕೈ ಜೋಡಿಸುವ ಸಲುವಾಗಿ ರಾಜ್ಯದಾದ್ಯಂತ ಹಸ್ತಪ್ರತಿಗಳ ಸಮೀಕ್ಷೆ ಕಾರ್ಯ ಪ್ರಾರಂಭಿಸಿ, ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ರಾಜ್ಯ ಮಟ್ಟದ ಸ್ಥಾಯಿ ಸಮಿತಿಯನ್ನು ರಚಿಸಲಾಗಿದೆ. ಅದೇ ರೀತಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಸಮಿತಿಯನ್ನು ರಚನೆ ಮಾಡಲಾಗಿದೆ. ಸಂಬಂಧಿತ ಜಿಲ್ಲೆಯ ಜಿಲ್ಲಾಧಿಕಾರಿಗಳು ಸಮಿತಿಯ ಅಧ್ಯಕ್ಷರಾಗಿದ್ದು , ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕರು/ ಸಹಾಯಕ ನಿರ್ದೇಶಕರು ಸದಸ್ಯ ಕಾರ್ಯದರ್ಶಿಗಳಾಗಿರುತ್ತಾರೆ ಎಂದರು.

ಜಿ.ಪಂ. ಕಾರ್ಯನಿರ್ವಾಹಕ ಅಧಿಕಾರಿ ಗಳು, ಮಹಾನಗರಪಾಲಿಕೆ/ ನಗರಸಭೆ ಪೌರಾಯುಕ್ತರು, ಕ್ಲಸ್ಟರ್ ಕೇಂದ್ರದ ಸಂಯೋಜಕರು, ಜಿಲ್ಲೆಯ ರಾಜ್ಯ ವಿಶ್ವ ವಿದ್ಯಾಲಯ/ ಸಂಶೋಧನಾ ಸಂಸ್ಥೆಯ ನೋಂದಣಾಧಿಕಾರಿಗಳು, ಹಸ್ತಪ್ರತಿ/ ಶಿಲಾಶಾಸನಶಾಸ್ತ್ರ / ಇತಿಹಾಸ/ ಸಂಸ್ಕೃತ/ ಪ್ರಾದೇಶಿಕ ಬಾಷೆಗಳು/ ಆರ್ಕೆವ್ ವಿಷಯ ದಲ್ಲಿ ಜಿಲ್ಲಾಧಿಕಾರಿಗಳಿಂದ ನಾಮನಿರ್ದೇಶಿತ ಇಬ್ಬರು ತಜ್ಞರು ಸಮಿತಿಯ ಸದಸ್ಯರುಗಳಾಗಿರುತ್ತಾರೆ ಎಂದರು.

ಜಿಲ್ಲೆಯ ಗ್ರಂಥಾಲಯಗಳು, ದೇವಾಲಯಗಳು, ಮಠಗಳು, ಶೈಕ್ಷಣಿಕ ಸಂಸ್ಥೆಗಳು ಮತ್ತು ಖಾಸಗಿ ಸಂಗ್ರಹಗಳಲ್ಲಿ ಇರುವ ಹಸ್ತಪ್ರತಿಗಳನ್ನು ಗುರುತಿಸಿ ದಾಖಲಿಸುವುದು, ಸಂಗ್ರಹ ಸ್ಥಳಗಳಿಗೆ ಪ್ರವೇಶ ಕಲ್ಪಿಸಿ, ಸಂರಕ್ಷಕರ ಸಹಕಾರವನ್ನು ಸಮೀಕ್ಷಾ ಪ್ರಕ್ರಿಯೆಯಲ್ಲಿ ಖಚಿತಪಡಿಸುವುದು, ಸಮೀಕ್ಷಾ ತಂಡಗಳಿಗೆ ದಾಖಲೀಕರಣ ಹಾಗೂ ಪಟ್ಟಿ ಮಾಡಿಕೆ ಕಾರ್ಯಗಳಲಿ ಸಹಾಯ ಮಾಡುವುದು, ಸ್ಥಳೀಯ ಸಂಸ್ಥೆಗಳು ಮತ್ತು ಹಸ್ತಪ್ರತಿ ಸಂರಕ್ಷಕರಲ್ಲಿ ಮಿಷನ್‌ನ ಉದ್ದೇಶಗಳಕುರಿತು ಜಾಗೃತಿ ಮೂಡಿಸುವುದು, ರಾಜ್ಯ ನೋಡಲ್ ಇಲಾಖೆಗೆ ನಿಯಮಿತ ಅವಧಿಯಲ್ಲಿ ಪ್ರಗತಿಯ ವರದಿ ಸಲ್ಲಿಸುವುದು ಇವು ಸಮಿತಿಯ ಕರ್ತವ್ಯಗಳಾಗಿವೆ ಎಂದು ಸಭೆಗೆ ವಿವರಿಸಿದರು.

ಇದೇ ಸಂದರ್ಭದಲ್ಲಿ ಕ್ಲಸ್ಟರ್ ಕೇಂದ್ರಗಳ ಪಾತ್ರ, ಜಿಲ್ಲಾ ಮಟ್ಟದ ಸಮನ್ವಯ , ಸಮೀಕ್ಷೆ ಜಾರಿಯ ವಿಧಾನ, ಮೇಲ್ವಿಚಾರಣೆ ಮತ್ತು ಪರಿಶೀಲನೆ, ಅನುಸರಣೆ ಮತ್ತು ನೈತಿಕ ಮಾರ್ಗ ಸೂಚಿಗಳ ಕುರಿತು ಚರ್ಚಿಸಲಾಯಿತು.

ಸಭೆಯಲ್ಲಿ ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಗದಗ ಬೆಟಗೇರಿ ನಗರಸಭೆ ಪೌರಾಯುಕ್ತ ರಾಜಾರಾಮ ಪವಾರ, ತಹಶೀಲ್ದಾರ ಶ್ರೀನಿವಾಸಮೂರ್ತಿ ಕುಲಕರ್ಣಿ, ಆರ್‌ಡಿಪಿಆರ್ ವಿಶ್ವವಿದ್ಯಾಲಯದ ಶಶಿಭೂಷಣ, ಎಸ್ ಎಂ ಸಿಂಪಿಗೇರ, ಜಿ ಎಸ್ ಗಾವಕರ್, ಗುರುಸಿದ್ದಪ್ಪಯ್ಯ ಹಿರೇಮಠ, ಶ್ರೀಧರ್‌ರಾವ್ ಸೇರಿದಂತೆ ಇತರರು ಹಾಜರಿದ್ದರು.

## ಪೇಪರ ಹಂಚಿದ ಹುಡುಗ 20 ಕೃತಿ ರಚಿಸಿದ ಸಾಹಿತಿ: ಡಾ. ವಿ.ಡಿ.ಐಹೊಳ್ಳಿ



**ಬೆಳಗಾವಿ ವಾರ್ತೆ ವಿಜಯಪುರ:** "ಶ್ರೀ ರಾಘವೇಂದ್ರ ಕುಲಕರ್ಣಿ ಕನ್ನೂರಕರ ವಿರಚಿತ 'ಮುಂಜಾನೆ ಮಾತು' ಕೃತಿಯಲ್ಲಿ ಹಲವಾರು ಮೌಲ್ಯಯುತವಾದ ಉಪದೇಶದ ಮಾತುಗಳಿದ್ದು, ಪ್ರತಿಯೊಬ್ಬರೂ ಅವುಗಳನ್ನು ಓದಿ ವರ್ತನೆಯಲ್ಲಿ ಪರಿವರ್ತನೆಯಾಗಬೇಕು. 'ಆಧುನಿಕ ಶಾಕುಂತಲೆ' ಎಂಬ ಕೃತಿಯು ತಾವು ನವೋದಯ ವಿದ್ಯಾಲಯದಲ್ಲಿ ಮೂರು ದಶಕಗಳಿಗಿಂತ ಹೆಚ್ಚು ಕಾಲ ಸೇವೆ ಸಲ್ಲಿಸಿದ್ದುದರ ಪರಿಣಾಮವಾಗಿ ವಿದ್ಯಾರ್ಥಿಗಳಲ್ಲಿಯ ಸಮಸ್ಯೆಗಳನ್ನು ಜೀವನಾನುಭವದ ಮೂಲಕ ಪರಿಹರಿಸಿದ ಆಪದ್ಬಾಂದವರು. ಕುಲಕರ್ಣಿಯವರು ವಿದ್ಯಾರ್ಥಿ ದೆಶೆಯಲ್ಲಿಯೇ ಪೇಪರ ಹಂಚಿ ಆಗಿನ ವಿದ್ಯಾರ್ಥಿ ಇಂದು ಸಾಹಿತಿಯಾಗಿ ಸುಮಾರು 20 ಕೃತಿಗಳನ್ನು ರಚಿಸಿದರೆಂದರು" ಎಂದು ವಿಶ್ರಾಂತ ಪ್ರಾಚಾರ್ಯ ಡಾ. ವಿ.ಡಿ.ಐಹೊಳ್ಳಿಯವರು ಕೃತಿಗಳನ್ನು ಪರಿಚಯಿಸಿ ಮಾತನಾಡಿದರು.

ನಗರದ ಡಾ. ಫ.ಗು.ಹಳಕಟ್ಟಿ ಸಂಶೋಧನ ಕೇಂದ್ರದಲ್ಲಿ ಹಮ್ಮಿಕೊಂಡ ಕರ್ಯಕ್ರಮದಲ್ಲಿ ಮಾತನಾಡಿದ ಅವರು "ಪೋಷಕರು, ಪಾಲಕರು ಮತ್ತು ಶಿಕ್ಷಕರು ಈ ಕೃತಿಗಳನ್ನು ಓದಿದಾಗ ಬದಲಾವಣೆ ಕಾಣಲು ಸಾಧ್ಯ" ಎಂದರು.

ಹಿರಿಯ ಸಂಶೋಧಕರಾದ ಡಾ. ಕೃಷ್ಣ ಕೊಲ್ಹಾರಕುಲಕರ್ಣಿ ಮತ್ತು ಡಾ. ಎಂ.ಎಸ್.ಮದಭಾವಿ ಮುಂಜಾನೆ ಮಾತು ಹಾಗೂ ಆಧುನಿಕ ಶಾಕುಂತಲೆ ಎಂಬ ನೂತನ ಕೃತಿಗಳನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದರು. ಲೇಖಕ ರಾಘವೇಂದ್ರ ಕುಲಕರ್ಣಿ ಸ್ವರಚಿತ ಕವನ ವಾಚಿಸಿ ಕೃತಿಯ ಆಶಯ ಹೇಳಿದರು. ಶ್ರೀ ಬಿ.ಆರ್.ಬನಸೋಡೆ ವಚನಗಾಯನ ಮಾಡಿದರು. ಸುಭಾಸ ಕನ್ನೂರ ಅತಿಥಿಗಳನ್ನು ಪರಿಚಯಿಸಿ ಕರ್ಯಕ್ರಮ ನಿರೂಪಿಸಿದರು. ಜಿ.ಆರ್.ಕುಲಕರ್ಣಿ, ದಾಬಡೆ ಎಚ್.ಜಿ., ದಾಬಡೆ ಎಸ್.ಜಿ, ಚೇತನ ಕುಲಕರ್ಣಿ, ಎಸ್.ಎನ್.ಶಿವಣಗಿ, ಎಂ.ಜಿ.ಯಾದವಾಡ, ಜೆ.ಎಸ್.ಮೋಟಗಿ, ಡಾ. ಆರ್.ಎಂ.ಯಲಗೋಡ, ಸುಖಾಂತ ಕುಲಕರ್ಣಿ, ಮಾಧವ ಗುಡಿ, ವಿ.ಎಂ.ಬಾಗಾಯತ ಮುಂತಾದವರು ಉಪಸ್ಥಿತರಿದ್ದರು.

## ವಿಕಲಚೇತನರಿಗೆ ಬ್ಯಾಟರಿ ಚಾಲಿತ ಮೋಟರ್ ಬೈಕ್ ವಿತರಣೆ

**ಬೆಳಗಾವಿ ವಾರ್ತೆ ಧಾರವಾಡ:** 2025–26ನೇ ಸಾಲಿನ ತಾಲೂಕ ಪಂಚಾಯತ ಅನಿರ್ಬಂಧಿತ ಅನುದಾನದಲ್ಲಿ ಶೇ.5 ರಷ್ಟು ಮೀಸಲಿರಿಸಿದ ಅನುದಾನದಲ್ಲಿ ವಿಕಲಚೇತನರಿಗೆ ಬ್ಯಾಟರಿ ಚಾಲಿತ ಮೋಟರ್ ಬೈಕ್‌ಗಳನ್ನು ಧಾರವಾಡ ತಾಲೂಕ ವ್ಯಾಪ್ತಿಯ 09 ಜನ ದೈಹಿಕ ನ್ಯೂನ್ಯತೆ ಹೊಂದಿದ ವಿಕಲಚೇತನರಿಗೆ ಕಾರ್ಮಿಕ ಸಚಿವರು ಹಾಗೂ ಧಾರವಾಡ ಉಸ್ತುವಾರಿ ಸಚಿವರಾದ ಸಂತೋಷ ಲಾಡ್ ಅವರು ವಿತರಿಸಿದರು. ಈ ಸಂದರ್ಭದಲ್ಲಿ ಶಾಸಕರಾದ ಎನ್‌ಎಚ್.ಕೋನರಡ್ಡಿ, ಜಿಲ್ಲಾಧಿಕಾರಿ ಸ್ನೇಹಲ್ ಆರ್., ಜಿಲ್ಲಾ ಪಂಚಾಯತ ಉಪಕಾರ್ಯದರ್ಶಿ ಹಾಗೂ ಧಾರವಾಡ ತಾ.ಪಂ ಆಡಳಿತಾಧಿಕಾರಿ ಮಲ್ಲಿಕಾರ್ಜುನ ತೊದಲಬಾಗಿ, ಕಾರ್ಯನಿರ್ವಾಹಕ ಅಧಿಕಾರಿ ಗಂಗಾಧರ ಕಂದಕೂರ ಹಾಗೂ ಇತರ ಮುಖಂಡರು, ವಿವಿದ್ದೋದ್ದೇಶ ಪುರ್ನವಸತಿ ಕಾರ್ಯಕರ್ತ ಬಸವರಾಜ ಬೆಳಾರದ ಹಾಗೂ ಇತರರು ಉಪಸ್ಥಿತರಿದ್ದರು.



## ಬಹಿರಂಗ ಹರಾಜು

**ಬೆಳಗಾವಿ ವಾರ್ತೆ ಗದಗ :** ನರೇಗಲ್ಲ ಪಟ್ಟಣ ಪಂಚಾಯತ ಕಾರ್ಯಾಲಯದ ವ್ಯಾಪ್ತಿಗೆ ಬರುವ ಗುರುತಿನ ಚೀಟಿ ಹೊಂದಿದ ಹಾಗೂ ಗುರುತಿನ ಚೀಟಿ ಹೊಂದದೇ ಇರುವ ಬೀದಿ ಬದಿ ವ್ಯಾಪಾರಸ್ಥರ ಪ್ರತಿ ದಿನದ, ಡಬ್ಬಿ ಅಂಗಡಿಗಳ ಹಾಗೂ ವಾರದ ಸಂತೆ (ಸೋಮವಾರ)ದ ಸಂತೆ ಕರ (ಹಂಗಾಮಿ ಫೀ) ಸಂಗ್ರಹದ ಕಾರ್ಯವನ್ನು ಗುತ್ತಿಗೆ ಮೂಲಕ ನಿರ್ವಹಣೆಯನ್ನು ಮಾಡಲು ಬಹಿರಂಗ ಹರಾಜು ಪ್ರಕ್ರಿಯೇಯನ್ನು ದಿನಾಂಕ : 30/04/2026 ರಂದು ಮಧ್ಯಾಹ್ನ 3.30 ಗಂಟೆಗೆ ನಡೆಸಲಾಗುವುದು. ಹೆಚ್ಚಿನ ಮಾಹಿತಾಗಿ ನರೇಗಲ್ ಪಟ್ಟಣ ಪಂಚಾಯತ ಕಾರ್ಯಾಲಯ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

# ಉನ್ನತ ಶ್ರೇಣಿಯಲ್ಲಿ ಪಾಸಾದ ವಿದ್ಯಾರ್ಥಿಗಳಿಗೆ ಸನ್ಮಾನ



**ಬೆಳಗಾವಿ ವಾರ್ತೆ ಧಾರವಾಡ:** ಧಾರವಾಡ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಜರುಗಿದ ಕೆಡಿಪಿ ಸಭೆಯ ಪೂರ್ವದಲ್ಲಿ, ಪ್ರಸಕ್ತ ಸಾಲಿನ ಎಸ್.ಎಸ್.ಎಲ್.ಸಿ ಮತ್ತು ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆದು ಉನ್ನತ ಶ್ರೇಣಿಯಲ್ಲಿ ಪಾಸಾಗಿರುವ ವಿದ್ಯಾರ್ಥಿಗಳನ್ನು ಜಿಲ್ಲಾಡಳಿತದ ಪರವಾಗಿ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್, ವಿಧಾನ ಪರಿಷತ್ತ ಸರಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ್, ಶಾಸಕರಾದ ಎನ್.ಎಚ್.ಕೋನರಡ್ಡಿ, ಮಹೇಶ ಟೆಂಗಿನಕಾಯಿ, ಎಂ.ಆರ್.ಪಾಟೀಲ ಅವರು ಸನ್ಮಾನಿಸಿ, ಗೌರವಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಸ್ನೇಹಲ್ ಆರ್., ಪೊಲೀಸ್ ಆಯುಕ್ತ ಎನ್.ಶಶಿಕುಮಾರ, ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ, ಡಿಸಿಪಿ ಶೃತಿ. ಎನ್.ಎಸ್., ಡಿಡಿಪಿಐ ಎಸ್.ಎಸ್.ಕೆಳದಿಮಠ, ಡಿಡಿಪಿಯು ತೇಜಸ್ವಿನಿ ನಾರಾಯಣಕರ ಅವರು ಇದ್ದರು.

ಸನ್ಮಾನಿತ ಪಿಯುಸಿ ವಿದ್ಯಾರ್ಥಿಗಳು: ಕಲಾ ವಿಭಾಗದಲ್ಲಿ ಧಾರವಾಡ ಜೆ.ಎಸ್.ಎಸ್ ವಿಜ್ಞಾನ ಕಾಲೇಜಿನ ವಿದ್ಯಾರ್ಥಿ ಶ್ರಾವಣಿ ಪಾಟೀಲ 595 ಅಂಕ, ಕರ್ನಾಟಕ ಕಲಾ ಕಾಲೇಜು ವಿದ್ಯಾರ್ಥಿ ಲಾಲಯ್ಯಾ –592, ಆರ್.ಎನ್.ಶೆಟ್ಟಿ, ಸರ್ಕಾರಿ ಪಿಯು ಕಾಲೇಜಿನ ವಿದ್ಯಾರ್ಥಿ ಸಾಧನಾ ಈಶ್ವರಯ್ಯಾ ತೊರಗಲಮಠ–591, ಕರ್ನಾಟಕ ಕಲಾ ಕಾಲೇಜು ವಿದ್ಯಾರ್ಥಿಗಳಾದ ಅಪೂರ್ವಾ ಪ್ರಕಾಶ ಕರಿಡಿಗುಡ್ಡ–590, ಅದಿತ್ಯಾ ಮಂಜುನಾಥ ದುಸ್ಗೇಕರ್– 589, ಅಮೂಲ್ಯ ದ್ಯಾಮಗೊಂಡ–588, ಕುಂದಗೋಳ ಕುಬಿಹಾಳ ಖಗಖಎ ಅಔಒಕ ಕಗ ಕಾಲೇಜಿನ ವಿದ್ಯಾರ್ಥಿ ಬಸವ್ವ ಬಸವರಾಜ ಕೇರಿಕೊಪ್ಪ–586, ಧಾರವಾಡ ಜೆ.ಎಸ್.ಎಸ್ ವಿಜ್ಞಾನ ಕಾಲೇಜಿನ ವಿದ್ಯಾರ್ಥಿ ಎ ವಿದ್ಯಾಶ್ರೀ–584, ಹುಬ್ಬಳ್ಳಿ ವಿದ್ಯಾನಗರದ ಎಸ್‌ಕೆ ಆರ್ಟ್ಸ್ ಎಚ್ ಎಸ್‌ಕೆ ಎಸ್‌ಸಿ ಪಿಯು ಕಾಲೇಜಿನ ವಿದ್ಯಾರ್ಥಿ ಬಿಬಿ ಅಫ್ಸಾನಾ ಬಸೀರ್ ಅಹ್ಮದ್ ನದಾಫ್–584 ಅಂಕ ಪಡೆದಿದ್ದಾರೆ.

ವಾಣಿಜ್ಯ ವಿಭಾಗದಲ್ಲಿ ಹುಬ್ಬಳ್ಳಿ ಕೇಶ್ವಾಪುರ ಫಾತಿಮಾ ಕಂಪ್ ಪಿಯು ಕಾಲೇಜಿನ ವಿದ್ಯಾರ್ಥಿ ಐನಾಜ್ ಬೇಗಂ ಅಧೋನಿ–594, ಹುಬ್ಬಳ್ಳಿ ವಿದ್ಯಾನಗರದ ಜೆಜಿ ಪಿಯು ಕಾಲೇಜಿನ ವಿದ್ಯಾರ್ಥಿ ದಿವ್ಯಾ ವಸಂತ್ ಡಂಬಲ್–594, ಹುಬ್ಬಳ್ಳಿ ವಿದ್ಯಾನಗರದ ಕೆಎಲ್‌ಇ ವಾಣಿಜ್ಯ ಪಿಯು ಕಾಲೇಜಿನ ವಿದ್ಯಾರ್ಥಿ ಹರ್ಷಿತಾ ಎಸ್ ನಾನ್ಯಾದ್–594, ಧಾರವಾಡ ವಿದ್ಯಾಗಿರಿ ಜೆ.ಎಸ್.ಎಸ್.ಆರ್.ಎಸ್ ಹುಕ್ಕೇರಿಕಾರ್ ಪಿಯು ಕಾಲೇಜಿನ ವಿದ್ಯಾರ್ಥಿ ಅನುಷ್ಕಾ ಎಚ್ ಶೂರ್ಪಾಲಿ–592, ಹುಬ್ಬಳ್ಳಿ ನಾಗಶೆಟ್ಟಿಕೊಪ್ಪ ಚಿನ್ಮಯ ಖಓಆಕ ಪಿಯು ಕಾಲೇಜಿನ ವಿದ್ಯಾರ್ಥಿ ಸಿದ್ಧಿ ಗೋಖಲೆ–592, ಹುಬ್ಬಳ್ಳಿ ಶಿರೂರ್ ಪಾರ್ಕ್ ಎದುರಿನ ಸಮರ್ಥ ಕಾಲೇಜಿನ ವಿದ್ಯಾರ್ಥಿಗಳಾದ ಸುಹಾನಾ ರಹೇಮಾನ್ ಮಟ್ಟೆ– 592, ಜಿಯಾ ಜಾಫರ್ ಮಾಟ್ಟೆ–592, ಧಾರವಾಡ ವಿದ್ಯಾಗಿರಿಯ ಜೆ.ಎಸ್.ಎಸ್.ಆರ್.ಎಸ್ ಹುಕ್ಕೇರಿಕಾರ್ ಪಿಯು ಕಾಲೇಜಿನ ವಿದ್ಯಾರ್ಥಿಗಳಾದ ವಿಜಯಲಕ್ಷ್ಮೀ ಕುಂಬಾರ–592, ಕೃಷ್ಣ ಎಂ ವ್ಯಾಪಾರಿ–591 ಅಂಕ ಪಡೆದಿದ್ದಾರೆ.

ವಿಜ್ಞಾನ ವಿಭಾಗದಲ್ಲಿ ಹುಬ್ಬಳ್ಳಿ (ಕುಂದಗೋಳ ಕ್ರಾಸ್ ಕೆ.ಜಿ ಹುಣಶಿ) ಪ್ರೇರಣಾ ಪಿಯು ಕಾಲೇಜಿನ ವಿದ್ಯಾರ್ಥಿ ಚೈತ್ರ ಪ್ರಕಾಶ್ ರಡ್ಡರ–596, ಹುಬ್ಬಳ್ಳಿಯ ಓರಿಯಂಟಲ್ ಪಿಯು ಕಾಲೇಜಿನ ವಿದ್ಯಾರ್ಥಿ ಪ್ರಜ್ಞಾ ಹುರ್ಳಿಕುಪ್ಪಿ–595, ಹುಬ್ಬಳ್ಳಿ ಬೈರಿದೇವರಕೊಪ್ಪದ ವಿದ್ಯಾನಿಕೇತನ ಪಿಯು ಕಾಲೇಜಿನ ವಿದ್ಯಾಥಿಗಳಾದ ಸ್ಥಾವನ್ ಇನಾಮದಾರ–595, ಅಭಿಷೇಕ ಮಹಾಂತೇಶ ಚನ್ನಗೊಂಡ–593, ಅಮೃತ ಉಮಚಗಿ–593, ಧಾರವಾಡದ ಶ್ರೀಮತಿ ವಿಪಿ ಹಂಚಿನಮನಿ ಪಿಯು ಕಾಲೇಜಿನ ವಿದ್ಯಾರ್ಥಿ ಸೃಷ್ಟಿ ರವಿಕುಮಾರ್ ಹಂಚಾಟೆ–594, ಹುಬ್ಬಳ್ಳಿಯ ಬೇಸ್ ಪಿಯು ಕಾಲೇಜಿನ ವಿದ್ಯಾರ್ಥಿಗಳಾದ ಲಕ್ಷ್ಮಿ ಆರ್ ಜ್ಯೋತಿ–593, ಪ್ರತೀತ್ ಆರ್ ಶಾನಭಾಗ್–592, ಧಾರವಾಡ ಅರ್ಜುನ ವಿಜ್ಞಾನ ಪಿಯು ಕಾಲೇಜು ದರ್ಶನ್ ಸುಬ್ರಾಯ್ ಭಟ್–592 ಅಂಕ ಪಡೆದಿದ್ದಾರೆ.

**ಸನ್ಮಾನಿತ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳು:** ಹುಬ್ಬಳ್ಳಿ ಅಕ್ಷಯ ನಗರದ ಚೇತನ್ ಪಬ್ಲಿಕ್ ಸ್ಕೂಲ್‌ನ ವಿದ್ಯಾರ್ಥಿನಿ ಅಪೇಕ್ಷಾ ಪಾಟೀಲ–623 ಅಂಕ ಪಡೆದು ಧಾರವಾಡ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದಿದ್ದಾರೆ.

ಧಾರವಾಡ ಮಲ್ಲಸಜ್ಜನ ಎಂ.ಇ.ಡಿ ಶಾಲೆಯ ವಿದ್ಯಾರ್ಥಿ ಪ್ರತೀಕ ಸರದಾರ, ತಿರ್ಲಾಪುರ ಜಿ.ಎಚ್.ಎಸ್ ಶಾಲೆಯ ವಿದ್ಯಾರ್ಥಿನಿ ಐಶ್ವರ್ಯ ಮಂಜುನಾಥ ರಾಯ್ಕರ, ಹುಬ್ಬಳ್ಳಿ ಭವಾನಿ ನಗರದ ಚಿನ್ಮಯ ವಿದ್ಯಾಲಯದ ವಿದ್ಯಾರ್ಥಿನಿ ಸಾಕ್ಷಿ ಕುಲಕರ್ಣಿ, ಹುಬ್ಬಳ್ಳಿ ಮದರ್ ಮೇರ್ರಿ ಶಾಲೆಯ ವಿದ್ಯಾರ್ಥಿನಿ ಪಲ್ಲವಿ ಮಂಜುನಾಥ ಮಾನೆ, ಖನ್ನೂರು ಆರ್.ವಿ.ಎಸ್ ಇಂಟರ್‌ನ್ಯಾಷನಲ್ ಪಬ್ಲಿಕ್ ಸ್ಕೂಲ್‌ನ ವಿದ್ಯಾರ್ಥಿನಿ ಪ್ರೇಮಾಬಾಯಿ ಬಸವರಾಜ ದೇಸಾಯಿ ಇವರುಗಳು 622 ಅಂಕ ಪಡೆದು ಜಿಲ್ಲೆಗೆ ದ್ವಿತೀಯ ಸ್ಥಾನ ಪಡೆದಿದ್ದಾರೆ. ಹುಬ್ಬಳ್ಳಿ ಕೇಶ್ವಾಪುರ ಕಾನ್ವೆಂಟ್ ಹೈಸ್ಕೂಲ್‌ನ ವಿದ್ಯಾರ್ಥಿನಿ ಮಧುಶ್ರೀ ಮಗಾಜಿಕೊಂಡಿ 621 ಅಂಕ ಪಡೆದು ಜಿಲ್ಲೆಗೆ ತೃತೀಯ ಸ್ಥಾನ ಪಡೆದಿದ್ದಾರೆ. ನವನಗರ ರೋಟರಿ ಎಚ್‌ಪಿಎಸ್ ಮತ್ತು ಎಚ್‌ಎಸ್ ಇಂಗ್ಲಿಷ್ ಮಾಧ್ಯಮ ಶಾಲೆಯ ವಿದ್ಯಾರ್ಥಿನಿ ಸನಾ ಕೌಸರ ಮುಲ್ಲಾ, ಹುಬ್ಬಳ್ಳಿ ಅಕ್ಷಯ ನಗರ ಚೇತನ ಪಬ್ಲಿಕ್ ಸ್ಕೂಲ್‌ನ ವಿದ್ಯಾರ್ಥಿನಿ ಜುಡಿತ ಡಿಯೋಧರ, ಕಲಘಟಗಿ ಸರ್ಕಾರಿ ಆದರ್ಶ ವಿದ್ಯಾಲಯದ ವಿದ್ಯಾರ್ಥಿನಿ ಯಶಸ್ವಿನಿ ರಾಜಶೇಖರ ಶೀಲವಂತ ಇವರುಗಳು 620 ಅಂಕ ಪಡೆದು ಜಿಲ್ಲೆಗೆ ನಾಲ್ಕನೇ ಸ್ಥಾನ ಪಡೆದಿದ್ದಾರೆ.

ಧಾರವಾಡ ವಿಕಲಚೇತನರ ಹಾಗೂ ಹಿರಿಯ ನಾಗರಿಕ ಸಬಲೀಕರಣ ಇಲಾಖೆ ಅಡಿಯಲ್ಲಿ ನಡೆಯುತ್ತಿರುವ ಆರೋಡ ಅಂಧ ಮಕ್ಕಳ ವಿಶೇಷ ಶಾಲೆಯ ವಿದ್ಯಾರ್ಥಿ ನಿರುಪಾದಿಗೌಡ ಪೊಲೀಸ ಪಾಟೀಲ –588 ಅಂಕ ಹಾಗೂ ನಿರ್ಮಲಾ ಪಾಟೀಲ –572 ಅಂಕಗಳನ್ನು ಪಡೆದಿದ್ದಾರೆ.

# ಐಟಿಐ ತರಬೇತಿಗಾಗಿ ಅರ್ಜಿ ಆಹ್ವಾನ

ಧಾರವಾಡ: ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ವಿವಿಧ ವೃತ್ತಿಗಳಲ್ಲಿ ಒಟ್ಟು 274 ಸ್ಥಾನಗಳಿಗೆ ಐಟಿಐ ತರಬೇತಿ ಪಡೆಯಲು ಪ್ರವೇಶಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ 10ನೇ ತರಗತಿ ಉತ್ತೀರ್ಣ, ಅನುತ್ತೀರ್ಣ ಅಭ್ಯರ್ಥಿಗಳು ಅರ್ಜಿಯನ್ನು https://www.cite.karnataka.gov.in ವೈಬ್‌ಸೈಟ್‌ದಲ್ಲಿ ಮೇ 08, 2026 ರೊಳಗಾಗಿ ಅರ್ಜಿ ಸಲ್ಲಿಸಬಹುದು.

ಸಂಸ್ಥೆಯಲ್ಲಿ ಇಲೆಕ್ಟ್ರಿಷಿಯನ್, ಪಿಟ್ಟರ್, ಇಲೆಕ್ಟ್ರಾನಿಕ್ ಮೆಕ್ಯಾನಿಕ್, ಆರ್.ಎ.ಸಿ.ಟಿ, ಬ್ಯಾಟರಿ ಇಲೆಕ್ಟ್ರಿಕ್ ವೇಹಿಕಲ್, ಅಡ್ವಾನ್ಸ ಮ್ಯಾನ್ಯುಫ್ಯಾಕ್ಚರಿಂಗ್, ರೋಬೊಟಿಕ್ಸ ಟೆಕ್ನಾಲಜಿ, ಎಮ್.ಪಿ.ಸಿ.ಎ, ವಿ.ಎ.ಡಿ, ಎ.ಯು.ಎ.ಟಿ, ಎಂ.ಎಂ.ವಿ, ವೆಲ್ಡರ್ ವೃತ್ತಿಗಳ ತರಬೇತಿ ಲಭ್ಯವಿದ್ದು, ಇದರ ಸದುಪಯೋಗ ಪಡೆದುಕೊಳ್ಳಬಹುದು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂ:7996603728, 7899022090 ಸಂಪರ್ಕಿಸಬಹುದು ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯ ರವಿಂದ್ರ ಪಿ. ದ್ಯಾಬೇರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಂವಿಧಾನ ನಮ್ಮ ಜೀವನಕ್ಕೆ ಮಾರ್ಗದರ್ಶಕ: ಕುಲಪತಿ ಪ್ರೊ.ವಿಜಯಾ ಕೋರಿಶೆಟ್ಟಿ



**ಬೆಳಗಾವಿ ವಾರ್ತೆ ವಿಜಯಪುರ:** ಸಂವಿಧಾನವು ಕೇವಲ ಪುಸ್ತಕವಾಗಿರದೆ, ನಮ್ಮ ದಿನನಿತ್ಯದ ಜೀವನಕ್ಕೆ ದಾರಿ ತೋರಿಸುವ ಮಾರ್ಗದರ್ಶಕವಾಗಿದೆ ಎಂದು ಮಹಿಳಾ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ವಿಜಯಾ ಕೋರಿಶೆಟ್ಟಿ ಹೇಳಿದರು.

ನಗರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ವಿಜಯಪುರದಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಅಧ್ಯಯನ ಕೇಂದ್ರ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಘಟಕದ ಸಹಯೋಗದಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿಯ ಅಂಗವಾಗಿ ಸೋಮವಾರ ಹಮ್ಮಿಕೊಂಡಿದ್ದ ವಿಶೇಷ ಉಪನ್ಯಾಸ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಹಿಳಾ ವಿಶ್ವವಿದ್ಯಾನಿಲಯದಲ್ಲಿ ಪ್ರತಿಯೊಂದು ಕಾರ್ಯಕ್ರಮದಲ್ಲೂ ಸಂವಿಧಾನದ ಪೀಠಿಕೆಯನ್ನು ಓದುವ ಪದ್ಧತಿಯನ್ನು ಕಡ್ಡಾಯವಾಗಿ ಅನುಸರಿಸಲಾಗುತ್ತಿದೆ. ವಿದ್ಯಾರ್ಥಿಗಳ ಸಮಗ್ರ ಅಭಿವೃದ್ಧಿಗಾಗಿ ಹಲವು ಉಪಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದರು.

ವಿಶೇಷ ಉಪನ್ಯಾಸ ನೀಡಿದ ಹುಲಕೋಟಿಯ ಗದಗ ಸಹಕಾರಿ ಜವಳಿ ಗಿರಣಿಯ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ಡಾ.ಅರ್ಜುನ ಗೊಳಸಂಗಿ ಮಾತನಾಡಿ, "ಸರ್ವರಿಗೂ ಸಮಪಾಲು ಮತ್ತು ಸಮಬಾಳು ನೀಡಿದ ಮಹಾನ್ ವ್ಯಕ್ತಿ ಬಾಬಾಸಾಹೇಬ್ ಅಂಬೇಡ್ಕರ್. ಯಾವುದೇ ಜಯಂತಿಗಳು ಜಾತಿಗೆ ಸೀಮಿತವಾಗಬಾರದು, ಸಂವಿಧಾನವೇ ನಮ್ಮ ಉಸಿರು, ನಮ್ಮ ಹೆಸರು ಆಗಬೇಕು. ಅದು ನಮ್ಮ ಪವಿತ್ರ ಗ್ರಂಥವಾಗಿದ್ದು, ಅದರ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಅಷ್ಟೇ ಅಲ್ಲದೇ ಹಳ್ಳಿಗಳ ಅಭಿವೃದ್ಧಿ ದೇಶದ ಅಭಿವೃದ್ಧಿಗೆ ಮೂಲವಾಗಿದ್ದು, ಅಂಬೇಡ್ಕರ್ ಅವರ ತತ್ವ–ಆದರ್ಶಗಳನ್ನು ಅನುಸರಿಸುವುದು ಅವಶ್ಯಕ ಎಂದರು.

ಇದೇ ಸಂದರ್ಭದಲ್ಲಿ ಸಿಂಡಿಕೇಟ್ ಸದಸ್ಯ ಶಿವಯೋಗಪ್ಪ ಮಾಡ್ಯಾಳ ಮಾತನಾಡಿ, ಡಾ.ಬಿ.ಆರ್.ಅಂಬೇಡ್ಕರ್ ಮಹಿಳೆಯರ ಹಕ್ಕುಗಳ ಪರ ಹೋರಾಟ ನಡೆಸಿ, ಹಿಂದೂ ಕೋಡ್ ಬಿಲ್ ಮೂಲಕ ಮಹಿಳಾ ಸಬಲೀಕರಣಕ್ಕೆ ಮಹತ್ವದ ಕೊಡುಗೆ ನೀಡಿದ್ದಾರೆ. ಮಹಿಳೆಯರ ಪ್ರಗತಿಯನ್ನು ದೇಶದ ಪ್ರಗತಿಯಿಂದಲೇ ಅಳೆಯಬೇಕು ಎಂಬುದು ಅವರ ಆಶಯವಾಗಿತ್ತು ಎಂದರು.

ಕುಲಸಚಿವ ಶಂಕರಗೌಡ ಸೊಮನಾಳ ಮಾತನಾಡಿ, ಪ್ರತಿಯೊಬ್ಬರೂ ಕಾನೂನುಗಳ ಕುರಿತು ಅರಿವು ಹೊಂದುವುದು ಅಗತ್ಯ ಎಂದು ಹೇಳಿದರು.

ಜಯಂತಿ ಪ್ರಯುಕ್ತ ಆಯೋಜಿಸಲಾದ ವಿವಿಧ ಸ್ಪರ್ಧೆಗಳಲ್ಲಿ ವಿಜೇತರನ್ನು ಸನ್ಮಾನಿಸಲಾಯಿತು. ರಸಪ್ರಶ್ನೆ ಸ್ಪರ್ಧೆಯಲ್ಲಿ ಅಶ್ವಿನಿ ಅನಶೆಟ್ಟಿ ಪ್ರಥಮ (?5000), ಅಂಕಿತಾ ಹಾವಿನಾಳ ದ್ವಿತೀಯ (?3000) ಹಾಗೂ ನಾಗಮ್ಮ ಗುಬ್ಯಾಡ ತೃತೀಯ (?2000) ಸ್ಥಾನ ಪಡೆದರು.

ಕಾರ್ಯಕ್ರಮದಲ್ಲಿ ಮೌಲ್ಯಮಾಪನ ಕುಲಸಚಿವ ಪ್ರೊ.ಬಸವರಾಜ ಲಕ್ಕಣ್ಣವರ, ಸಹಾಯಕ ಕುಲಸಚಿವೆ ರಾಜೇಶ್ವರಿ ಬದನೂರ, ಡಾ. ಸುರೇಖಾ ರಾಠೋಡ ಹಾಗೂ ಬೋಧಕ–ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು. ಡಾ. ಬಿ.ಆರ್. ಅಂಬೇಡ್ಕರ್ ಅಧ್ಯಯನ ಕೇಂದ್ರದ ನಿರ್ದೇಶಕ ಡಾ.ಸಂಜೀವಕುಮಾರ ಗಿರಿ ಸ್ವಾಗತಿಸಿದರು.

## ಕುಡಿಯುವ ನೀರಿನ ಸಮಸ್ಯೆ ನಿವಾರಣೆ ಕುರಿತು ಅಧಿಕಾರಿಗಳೊಂದಿಗೆ ಸಚಿವರ ಸಭೆ

# ಜಿಲ್ಲೆಯ ಯಾವುದೇ ಭಾಗದಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾದಲ್ಲಿ ಅಧಿಕಾರಿಗಳೇ ಹೊಣೆ



**ಬೆಳಗಾವಿ ವಾರ್ತೆ ಕೊಪ್ಪಳ:** ಜಿಲ್ಲೆಯಲ್ಲಿ ಉಂಟಾಗಿರುವ ಕುಡಿಯುವ ನೀರಿನ ಸಮಸ್ಯೆಯನ್ನು ಶಾಶ್ವತವಾಗಿ ಪರಿಹರಿಸಲು ಸಮಗ್ರ ಯೋಜನೆ ರೂಪಿಸಿ ತ್ವರಿತವಾಗಿ ಜಾರಿಗೆ ತರಬೇಕು. ಜಿಲ್ಲೆಯ ಯಾವುದೇ ಭಾಗದಲ್ಲಿ ಕುಡಿಯುವ ನೀರಿನ ಸಮಸ್ಯೆ ಕಂಡುಬಂದಲ್ಲಿ ಸಂಬಂಧಿಸಿದ ಅಧಿಕಾರಿಗಳನ್ನೇ ನೇರ ಹೊಣೆ ಮಾಡಲಾಗುವುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ್ ಎಸ್. ತಂಗಡಗಿ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಸೋಮವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯ ಕುಡಿಯುವ ನೀರಿನ ಸಮಸ್ಯೆ ಕುರಿತು ಅಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬೇಸಿಗೆ ತೀವ್ರವಾಗುತ್ತಿರುವ ಹಿನ್ನೆಲೆಯಲ್ಲಿ ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಕುಡಿಯುವ ನೀರಿನ ಕೊರತೆ ಗಂಭೀರ ಸಮಸ್ಯೆಯಾಗಿ ಪರಿಣಮಿಸಿದೆ. ಜನರಿಗೆ ಯಾವುದೇ ರೀತಿಯ ತೊಂದರೆ ಆಗದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವುದು ಅಧಿಕಾರಿಗಳ ಪ್ರಮುಖ ಜವಾಬ್ದಾರಿಯಾಗಿದೆ. ತಹಶೀಲ್ದಾರರು ಹಾಗೂ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು ಸಮಸ್ಯಾತ್ಮಕ ಗ್ರಾಮಗಳನ್ನು ಗುರುತಿಸಬೇಕು. ಸಮಸ್ಯೆ ಇರುವ ಗ್ರಾಮಗಳಲ್ಲಿ ಖಾಸಗಿ ಬೋರ್‌ವೆಲ್‌ಗಳನ್ನು ಬಾಡಿಗೆ ಪಡೆದು ಅಥವಾ ಟ್ಯಾಂಕರ್‌ಗಳ ಮೂಲಕ ನೀರು ಪೂರೈಕೆ ಮಾಡಿ. ಪ್ರತಿ ಗ್ರಾಮ ಪಂಚಾಯತಿ, ತಾಲ್ಲೂಕು ಪಂಚಾಯತಿ, ಪಟ್ಟಣ ಪಂಚಾಯತಿ, ಪುರಸಭೆ, ತಹಶೀಲ್ದಾರ ಕಾರ್ಯಾಲಯಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಕುರಿತು ದೂರು ನೀಡಲು ಸಹಾಯವಾಣಿಯನ್ನು ಕಡ್ಡಾಯವಾಗಿ ತೆರೆಯಬೇಕು. ಪ್ರತಿ ನಿತ್ಯ ಬಂದ ದೂರುಗಳು, ಪರಿಹಾರಕ್ಕೆ ಕೈಗೊಂಡ ಕ್ರಮಗಳ ಕುರಿತು ವರದಿ ಸಲ್ಲಿಸಬೇಕು. ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕೆ ವಿಧಾನಸಭಾ ಕ್ಷೇತ್ರವಾರು ನೋಡಲ್ ಅಧಿಕಾರಿಗಳನ್ನು ನಿಯೋಜಿಸಲಾಗಿದ್ದು, ಅಧಿಕಾರಿಗಳು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಿ ಎಂದು ಹೇಳಿದರು.

ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ಕುಡಿಯುವ ನೀರಿನ ಲಭ್ಯತೆ ಕುರಿತು ಪ್ರತಿದಿನ ವರದಿ ಸಲ್ಲಿಸಬೇಕು. ಕೆಟ್ಟಿರುವ ಪೈಪ್‌ಲೈನ್‌ಗಳು, ಮೋಟಾರ್‌ಗಳು ಹಾಗೂ ಬೋರ್‌ವೆಲ್‌ಗಳನ್ನು ತಕ್ಷಣ ದುರಸ್ತಿ ಮಾಡಬೇಕು. ಅಗತ್ಯವಿದ್ದಲ್ಲಿ ಟ್ಯಾಂಕರ್ ಮೂಲಕ ನೀರು ಪೂರೈಕೆ ಮಾಡಬೇಕು. ಯಾವುದೇ ಗ್ರಾಮ ಅಥವಾ ವಾರ್ಡ್‌ನಲ್ಲಿ ನೀರಿನ ಕೊರತೆ ಉಂಟಾದರೆ ತಕ್ಷಣ ಸ್ಪಂದಿಸಿ ಸಮಸ್ಯೆ ಪರಿಹರಿಸಬೇಕು. ಜನರು ಕಚೇರಿಗಳಿಗೆ ಅಲೆದಾಡುವ ಪರಿಸ್ಥಿತಿ ಬರಬಾರದು. ನೀರಿನ ಸಮಸ್ಯೆ ಕುರಿತು ಆರಂಭಿಸಿದ ಸಹಾಯವಾಣಿಯ ಬಗ್ಗೆ ದೊಡ್ಡ ಅಕ್ಷರಗಳಲ್ಲಿ ಎಲ್ಲ ಸಂಬಂಧಿಸಿದ ಕಚೇರಿಗಳಲ್ಲಿ ಸಹಾಯವಾಣಿ ಸಂಖ್ಯೆಯನ್ನು ಒಳಗೊಂಡ ಫಲಕಗಳನ್ನು ಹಾಕಬೇಕು. ಬೇಸಿಗೆ ಮುಗಿಯುವವರೆಗೂ ಎಲ್ಲ ಅಧಿಕಾರಿಗಳು ಕೇಂದ್ರ ಸ್ಥಾನದಲ್ಲಿದ್ದು ಕಾರ್ಯನಿರ್ವಹಿಸಬೇಕು ಎಂದು ಅವರು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಕುಡಿಯುವ ನೀರಿನ ಪೂರೈಕೆಗಾಗಿ ಸರ್ಕಾರದಿಂದ ಗ್ರಾಮೀಣ ಪ್ರದೇಶಕ್ಕೆ ರೂ. 1.50 ಕೋಟಿ, ನಗರ ಪ್ರದೇಶಗಳಿಗೆ ರೂ. 90 ಲಕ್ಷಗಳನ್ನು ಮೀಸಲಿಡಲಾಗಿದೆ. ಅನುದಾನದ ಕೊರತೆ ಇಲ್ಲ. ಆದ್ದರಿಂದ ನಿಯೋಜಿತ ನೋಡಲ್ ಅಧಿಕಾರಿಗಳು ಹಾಗೂ ತಹಶೀಲ್ದಾರ ಮತ್ತು ಇಒ ಗಳು ಖುದ್ದು ಗ್ರಾಮಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ನಂತರ ಗ್ರಾಮಗಳ ಸಮಸ್ಯೆಗಳ ಪಟ್ಟಿಯೊಂದಿಗೆ ಸಂಬಂಧಿಸಿದ ಶಾಸಕರೊಂದಿಗೆ ಟಾಸ್ಕ್ ಫೋರ್ಸ್ ಸಭೆ ನಡೆಸಬೇಕು. ನಂತರ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಬೇಕು. ಈ ವಾರದೊಳಗೆ ಕಡ್ಡಾಯವಾಗಿ ಟಾಸ್ಕ್ಫೋರ್ಸ್ ಸಭೆ ನಡೆಸಬೇಕು ಎಂದು ಅವರು ಹೇಳಿದರು.

ಅಮೃತ 2.0 ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳ ಪ್ರಗತಿಯನ್ನು ಪರಿಶೀಲಿಸಿದ ಸಚಿವರು, ಯೋಜನೆ ಕಾರ್ಯಗತಗೊಳಿಸುವಲ್ಲಿ ವಿಳಂಬವಾಗದಂತೆ ಗಮನ ಹರಿಸಬೇಕು ಎಂದು ಸೂಚಿಸಿದರು. ನಗರ ಪ್ರದೇಶಗಳಲ್ಲಿ ಶುದ್ಧ ಕುಡಿಯುವ ನೀರಿನ ಪೂರೈಕೆಯನ್ನು ಹೆಚ್ಚಿಸಲು ಈ ಯೋಜನೆ ಅತ್ಯಂತ ಪ್ರಮುಖವಾಗಿದ್ದು, ನಿಗದಿತ ಅವಧಿಯೊಳಗೆ ಕಾಮಗಾರಿಗಳನ್ನು ಪೂರ್ಣಗೊಳಿಸಬೇಕು. ಅಮೃತ 2.0 ಯೋಜನೆ ಜನರ ಜೀವನಮಟ್ಟವನ್ನು ಸುಧಾರಿಸುವ ಮಹತ್ವದ ಯೋಜನೆ. ಇದರ ಪ್ರಯೋಜನಗಳು ಶೀಘ್ರದಲ್ಲೇ ಜನರಿಗೆ ತಲುಪುವಂತೆ ಅಧಿಕಾರಿಗಳು ಪ್ರಾಮಾಣಿಕವಾಗಿ ಕೆಲಸ ಮಾಡಬೇಕು ಎಂದು ಹೇಳಿದರು.

ಸಭೆಯಲ್ಲಿ ಕೊಪ್ಪಳ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ಕೊಪ್ಪಳ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ, ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ, ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಉಪ ವಿಭಾಗಾಧಿಕಾರಿ ಕ್ಯಾ.ಮಹೇಶ ಮಾಲಗಿತ್ತಿ, ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು, ಎಲ್ಲ ತಾಲ್ಲೂಕುಗಳ ತಹಶೀಲ್ದಾರರು, ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು ಉಪಸ್ಥಿತರಿದ್ದರು.

# ಗೋಮಾತೆ ಹತ್ಯೆ ಸಂಪೂರ್ಣ ನಿಷೇಧಿಸಿ : ದೇವಪ್ಪ ಸೋಬಾನದ ಆಗ್ರಹ




**ಬೆಳಗಾವಿ ವಾರ್ತೆ ಕುಕನೂರು :** ಭರತ ಭೂಮಿಯಲ್ಲಿ ಜಾನುವಾರು ವಧೆ ಐತಿಹಾಸಿಕವಾಗಿ ನಿಷೇಧಿತ ವಿಷಯ. ಏಕೆಂದರೆ ಹಿಂದೂ ಧರ್ಮದಲ್ಲಿ ಹಸು ದೇವರ ಗೌರವಾನ್ವಿತ ಜೀವಿ. ಗೋ ಮಾತೆಯು ಪೂಜ್ಯನೀಯ ಪ್ರಾಣಿಯಾಗಿದ್ದು ಗೋ ಹತ್ಯೆ ಸಂಪೂರ್ಣವಾಗಿ ನಿಷೇಧವಾಗಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಸಿರು ಸೇನೆಯ ತಾಲೂಕು ಅಧ್ಯಕ್ಷ ಮತ್ತು ತಾಲೂಕ ಗೋ ಸಂರಕ್ಷಣೆ ಸನ್ಮಾನ ಅಭಿಯಾನದ ಗೌರವಾಧ್ಯಕ್ಷ ದೇವಪ್ಪ ಸೋಬಾನದ ಆಗ್ರಹಿಸಿದರು.

ಅವರು ಕುಕನೂರು ಪಟ್ಟಣದಲ್ಲಿ ಮಂಗಳವಾರ ಮಹಾಮಾಯ ದೇವಸ್ಥಾನದ ವೃತ್ತದಿಂದ ವೀರಭದ್ರಪ್ಪ ವೃತ್ತದವರೆಗೆ

ಗೋ ಹತ್ಯೆ ಖಂಡಿಸಿ ಹಮ್ಮಿಕೊಂಡ ಗೋಮಾತೆಯ ಗೌರವ ಅಭಿಯಾನದಲ್ಲಿ ಗೋ ಹತ್ಯೆ ಖಂಡಿಸಿ ಮನವಿಯನ್ನು ತಹಶೀಲ್ದಾರ ಮೂಲಕ ಜಿಲ್ಲಾಧಿಕಾರಿಗಳ ಮುಖಾಂತರ ಪ್ರಧಾನ ಮಂತ್ರಿಗಳಿಗೆ ಮನವಿ ಸಲ್ಲಿಸಿ ಮಾತನಾಡಿ ಇಡಿ ಪ್ರಪಂಚದಾದ್ಯಂತ ಗೋವಿಗೆ ಪ್ರಮುಖ ಸ್ಥಾನವಿದ್ದು, ಇಂತಹ ಗೋವುಗಳನ್ನು ಹತ್ಯೆ ಮಾಡಿ ನೀಚ ಕೃತ್ಯಗಳನ್ನು ಎಸುಗುವರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು

ನಮ್ಮ ರೈತ ಸಂಘಟನೆ ಹಾಗೂ ಜೈನ ಸಮುದಾಯ ಸೇರಿದಂತೆ ವಿವಿಧ ಸಂಘಟನೆಗಳು ಸೇರಿ ಮನವಿಯನ್ನು ಕೊಡುತ್ತಿದ್ದೇವೆ ಎಂದರು.

ಇನ್ನೂ ಮುಂದೆ ಗೋಮಾತೆಯ ಗೌರವದ ಅಭಿಯಾನದ ವತಿಯಿಂದ ಗೋ ಹತ್ಯೆಯಂತಹ ನೀಚ ಕೃತ್ಯ ನಡೆಸುವವರ ವಿರುದ್ಧ ಕಠಿಣ ಕಾನೂನು ಕ್ರಮಗಳನ್ನು ತರಲು ರಾಷ್ಟ್ರಾದ್ಯಂತ ಅಭಿಯಾನ ನಡೆಯುತ್ತಿದೆ. ಗೋ ಹತ್ಯೆ ಮಾಡುವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಬೇಕು. ಸೂಕ್ತ ಕ್ರಮ ಕೈಗೊಳ್ಳದಿದ್ದರೆ ಸಂಬಂಧಪಟ್ಟ ತಹಶೀಲ್ದಾರ ಅವರ ಕಾರ್ಯಾಲಯಕ್ಕೆ ಮುತ್ತಿಗೆ ಹಾಕಲಾಗುವುದು ಎಂದು ಎಚ್ಚರಿಸಿದರು.

ಸಂದರ್ಭದಲ್ಲಿ ಅನ್ನದಾನೇಶ್ವರ ಮಠದ ಮಹದೇವ ಮಹಾಸ್ವಾಮಿಗಳು, ಕರ್ನಾಟಕ ರಾಜ್ಯ ರೈತ ಸಂಘ ಹಸಿರು ಸೇನೆಯ ಉಪಾಧ್ಯಕ್ಷ ಅಂದಪ್ಪ ಹುರುಳಿ, ವಿಶಾಲ್ ಜೈನ್, ಶಿವಪ್ಪ ಭಂಗಿ, ಚಂದ್ರು ಎಳವತ್ತಿ, ಗೋ ರಕ್ಷಣೆ ಅಭಿಯಾನದ ಕಾರ್ಯದರ್ಶಿ ಶರಣಯ್ಯ ಹುಣಸಿಮರದ, ಬಸವರಾಜ ಮಾತನಾಡಿದರು.

ಗ್ರೇಡ್ ಟು ತಹಸಿಲ್ದಾರ್ ಮುರಳಿದರ್ ಕುಲಕರ್ಣಿ ಮನವಿ ಸ್ವೀಕರಿಸಿ ನಿಮ್ಮ ಮನವೇಯನ್ನು ಜಿಲ್ಲಾಧಿಕಾರಿಗಳ ಮುಖಾಂತರ ಪ್ರಧಾನಮಂತ್ರಿಯವರಿಗೆ ಕಳಿಸಿಕೊಡುವುದಾಗಿ ಹೇಳಿದರು.

ಈ ಸಂದರ್ಭದಲ್ಲಿ ಕುಕುನೂರು ತಾಲೂಕ ಸಂರಕ್ಷಣೆ ಸನ್ಮಾನ ಅಭಿಯಾನದ ಅಧ್ಯಕ್ಷರಾದ ಉಮೇಶ್ ಬೆದವಟ್ಟಿ, ಪೂಜಾ ಜೈನ್, ಯುವರಾಜ ಜಾಧವ್, ಜೈನ್ ಸಮಾಜದ ಅಧ್ಯಕ್ಷರಾದ ಸುಭಾಸ್ ಚಂದ್ ತಾಲೇಡ, ಮಲ್ಲಪ್ಪ ಚಳ್ಳಮರದ, ಬಾಳಪ್ಪ ಭಜಂತ್ರಿ, ಶರಣಪ್ಪ ಯತ್ನಟ್ಟಿ, ಬಸವರಾಜಪ್ಪ ಸಬರದ, ಮಲ್ಲಪ್ಪ ಚಳ್ಳಮರದ, ಬಾಳಪ್ಪ ಭಜಂತ್ರಿ, ಶಿವಪ್ಪ ಭಂಗಿ, ಬಸವರಾಜ ಲಾಲಗೊಂಡರ, ಬಸಪ್ಪ ಈಬೇರಿ, ಶಿವಪ್ಪ ಸಬರದ, ಕಳಕಪ್ಪ ಅಳವಂಡಿ, ಶರಣಪ್ಪ ಚಂಡೂರು, ರೇವಣಪ್ಪ, ಶ್ರೀಕಾಂತ್ ಬಿಳಗಿ, ಹಾಗೂ ರೈತಬಾಂಧವರು ಇತರರು ಇದ್ದರು.

# ಕನಕಗಿರಿ ಉತ್ಸವದ ಲೋಗೋ ಬಿಡುಗಡೆ

**ಬೆಳಗಾವಿ ವಾರ್ತೆ ಕೊಪ್ಪಳ:** ಇದೇ ಮೇ 16 ಮತ್ತು 17 ರಂದು ಐತಿಹಾಸಿಕ ಹಾಗೂ ಸಾಂಸ್ಕೃತಿಕ ವೈಭವವನ್ನು ಒಳಗೊಂಡ ಕನಕಗಿರಿ ಉತ್ಸವವನ್ನು ಅತ್ಯಂತ ವೈಭವದಿಂದ ಆಚರಿಸಲು ಸಕಲ ಸಿದ್ಧತೆಗಳು ಆರಂಭಗೊಂಡಿದ್ದು, ಇದರ ಅಂಗವಾಗಿ ಸೋಮವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಉತ್ಸವದ ಅಧಿಕೃತ ಲೋಗೋವನ್ನು ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ್ ಎಸ್. ತಂಗಡಗಿ ಅವರು ಬಿಡುಗಡೆಗೊಳಿಸಿದರು.

ಈ ಸಂದರ್ಭ ಕೊಪ್ಪಳ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ, ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ, ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಉಪ ವಿಭಾಗಾಧಿಕಾರಿ ಕ್ಯಾ.ಮಹೇಶ ಮಾಲಗಿತ್ತಿ, ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಹಾಗೂ ತಾಲ್ಲೂಕು



ಮಟ್ಟದ ಅಧಿಕಾರಿಗಳು, ಎಲ್ಲ ತಾಲ್ಲೂಕುಗಳ ತಹಶೀಲ್ದಾರರು, ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು ಉಪಸ್ಥಿತರಿದ್ದರು.

# ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ಯತ್ನಾಳ ಭೂಮಿಪೂಜೆ



**ಬೆಳಗಾವಿ ವಾರ್ತೆ ವಿಜಯಪುರ:** ನಗರ ಶಾಸಕರಾದ ಬಸನಗೌಡ ಪಾಟೀಲ ಯತ್ನಾಳ ರವರು ಶನಿವಾರ ವಿವಿಧ ಅಭಿವೃದ್ಧಿ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದರು.

ನಗರ ಮತಕ್ಷೇತ್ರದ ವ್ಯಾಪ್ತಿಯ ಖಂಡಸಾರಿ ತಾಂಡಾದಲ್ಲಿ ರೂ.1 ಕೋಟಿ ಅನುದಾನದಲ್ಲಿ ತಾಂಡಾದ ಮುಖ್ಯ ರಸ್ತೆ ಮತ್ತು ಆಂತರಿಕ ಸಿಸಿ ರಸ್ತೆ ಅಭಿವೃದ್ಧಿಪಡಿಸುವುದು ಹಾಗೂ ರೂ.5 ಲಕ್ಷ ಅನುದಾನದಲ್ಲಿ ಸೇವಾಲಾಲ್ ದೇವಸ್ಥಾನದ ಹತ್ತಿರ ಸಮುದಾಯ ಭವನ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದರು.

ಇದೇ ವೇಳೆ ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ ದಿಂದ ಸನ್ 2025–26ನೇ ಸಾಲಿನ ಮೂಲಭೂತ ಸೌಕರ್ಯ ಅಭಿವೃದ್ಧಿ ಯೋಜನೆಯಡಿ ಮಂಜೂರಿಸಲಾದ ಅನುದಾನದಲ್ಲಿ ಅಳವಡಿಸಲಾದ ಹೈಮಾಸ್ಟ್ ದೀಪ ಹಾಗೂ ಶುದ್ಧ ಕುಡಿಯುವ ನೀರಿನ ಘಟಕವನ್ನು ಉದ್ಘಾಟಿಸಿದರು.

ಇದಕ್ಕೂ ಮೊದಲು ವಾರ್ಡ್ ನಂ.1 ರಲ್ಲಿ ಬರುವ ಶಕ್ತಿ ನಗರ ರವೀಂದ್ರನಾಥ ಟ್ಯಾಗೋರ್ ಶಾಲೆ ಎದುರು ಮುಖ್ಯಮಂತ್ರಿಯವರ ಮೂಲಸೌಕರ್ಯ ಅಭಿವೃದ್ಧಿ ಯೋಜನೆಯಡಿ ಮಂಜೂರಾದ 2025–26ನೇ ಸಾಲಿನ ರೂ.25 ಲಕ್ಷ ಅನುದಾನದಲ್ಲಿ ಶಕ್ತಿ ನಗರ ಶಿವಶಿಂಪಿ ಸಮಾಜದ ಸಮುದಾಯ ಭವನ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದರು.

ಮಹಾನಗರ ಪಾಲಿಕೆ ಸದಸ್ಯರು, ಮುಖಂಡರು, ಕಾರ್ಯಕರ್ತರು, ಅಭಿಮಾನಿಗಳು ಹಾಗೂ ಸ್ಥಳೀಯ ನಿವಾಸಿಗಳು ಉಪಸ್ಥಿತರಿದ್ದರು.

## ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ನೋಂದಣಿ ಕಡ್ಡಾಯ

**ಬೆಳಗಾವಿ ವಾರ್ತೆ ಗದಗ:** ಗದಗ ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿರುವ ಎಲ್ಲಾ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳು ಕರ್ನಾಟಕ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಕಾಯ್ದೆ 1961 ಹಾಗೂ ನಿಯಮಗಳು–1963ರ ಅಡಿಯಲ್ಲಿ ನೋಂದಣಿ ಮಾಡಿಸಿಕೊಳ್ಳುವುದು ಕಡ್ಡಾಯವಾಗಿದೆ. ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಮಾಲೀಕರು ಹಾಗೂ ಉದ್ದಿಮೆದಾರರು ಈಗಾಗಲೇ ತಮ್ಮ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳನ್ನು ಕಾರ್ಮಿಕ ನಿರೀಕ್ಷಕರ ಕಛೇರಿ ಗದಗ 2ನೇ ವೃತ್ತ, ಗದಗ ಇಲ್ಲಿ ನೋಂದಣಿ ಮಾಡಿಸಿಕೊಂಡ ಸಂಸ್ಥೆಗಳನ್ನು ಹೊರತುಪಡಿಸಿ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳಲ್ಲಿ ಕಾರ್ಮಿಕರು ಇರುವ ಹಾಗೂ ಕಾರ್ಮಿಕರು ಇಲ್ಲದೇ ಇರುವ ಸಂಸ್ಥೆಗಳು ಸಹ ಕರ್ನಾಟಕ ಸರ್ಕಾರದ ಇ–ಕಾರ್ಮಿಕ ತಂತ್ರಾಂಶದಲ್ಲಿ https://www.ekarmika.karnataka.gov.in/ekarmika/Static/Home-aspx ನಿಗಧಿತ ಆನ್–ಲೈನ್ ಮೂಲಕ ಶುಲ್ಕವನ್ನು ಮತ್ತು ಅವಶ್ಯಕ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಿ ಸಂಸ್ಥೆಗಳ ನೋಂದಣಿ ಪತ್ರ ಪಡೆದುಕೊಳ್ಳಬೇಕು.

ಗದಗ ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಮಾಲೀಕರು ಉದ್ದಿಮೆದಾರರಿಗೆ ತಿಳುವಳಿಕೆ ನೀಡಲಾಗಿದೆ, ತಪ್ಪಿದ್ದಲ್ಲಿ ಕಾನೂನು ಕ್ರಮ ಕೈಗೊಳ್ಳಲಾಗುವುದೆಂದು ಕಾರ್ಮಿಕ ನಿರೀಕ್ಷಕರು ಉಮೇಶ್ ಎಸ್ ಹುಲ್ಲಣ್ಣವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗ್ರಾಮೀಣ ಆರೋಗ್ಯ ಸೇವೆಗೆ ಕೇಂದ್ರದ ಒತ್ತು; ಸುಧಾರಿತ ಸೌಲಭ್ಯಗಳ ಪೂರೈಕೆಗೆ ಪ್ರಧಾನಮಂತ್ರಿಗಳ ಕಾರ್ಯಕ್ರಮ ಜಾರಿ: ಕೇಂದ್ರ ಸಚಿವ ಪ್ರಲ್ಹಾದ ಜೋಶಿ

**ಬೆಳಗಾವಿ ವಾರ್ತೆ ಧಾರವಾಡ:** ಧಾರವಾಡ ತಾಲೂಕಿನ ಅಮ್ಮಿನಬಾವಿ ಗ್ರಾಮದಲ್ಲಿ ಸಮುದಾಯ ಆರೋಗ್ಯ ಕೇಂದ್ರವನ್ನು ಉನ್ನತೀಕರಿಸುವ ಬೇಡಿಕೆ ಇತ್ತು. ಈಗ ಕಾರ್ಯರೂಪಕ್ಕೆ ಬರುತ್ತಿದೆ ಎಂದು ಕೇಂದ್ರ ಗ್ರಾಹಕರ ವ್ಯವಹಾರಗಳ, ಆಹಾರ ಮತ್ತು ಸಾರ್ವಜನಿಕ ವಿತರಣೆ ಮತ್ತು ಹೊಸ ಹಾಗೂ ನವೀಕರಿಸ ಬಹುದಾದ ಇಂಧನ ಸಚಿವರಾದ ಪ್ರಲ್ಹಾದ ಜೋಶಿ ಅವರು ಹೇಳಿದರು.

ಅವರು ಇಂದು (ಏ. 27) ಮಧ್ಯಾಹ್ನ ಧಾರವಾಡ ತಾಲೂಕಿನ ಅಮ್ಮಿನಭಾವಿ ಗ್ರಾಮದಲ್ಲಿನ ಸರ್ಕಾರಿ ಆರೋಗ್ಯ ಕೇಂದ್ರದ ಆವರಣದಲ್ಲಿರುವ ಅಮ್ಮಿನಬಾವಿ ಸಮುದಾಯ ಆರೋಗ್ಯ ಕೇಂದ್ರದ ನೂತನ ಕಟ್ಟಡವನ್ನು ಉದ್ಘಾಟಿಸಿ, ಮಾತನಾಡಿದರು.

ಕೇವಲ ಕಟ್ಟಡ ನಿರ್ಮಾಣವೇ ಅಭಿವೃದ್ಧಿ ಅಲ್ಲ. ಅದರ ಜೊತೆಗೆ ಆಸ್ಪತ್ರೆಗಳಲ್ಲಿ ಸಮರ್ಪಕ ವೈದ್ಯರು, ಸಿಬ್ಬಂದಿ ಮತ್ತು ಔಷಧಿಗಳ ಲಭ್ಯತೆಗಳನ್ನು ಸರಿಯಾಗಿ ಸಾರ್ವಜನಿಕರಿಗೆ ನೀಡಿದಾಗ ಮಾತ್ರ ಅದು ಅಭಿವೃದ್ಧಿ ಅನಿಸಿಕೊಳ್ಳುತ್ತದೆ ಎಂದು ಅವರು ಹೇಳಿದರು.

ಭಾರತವು 140 ಕೋಟಿ ಜನಸಂಖ್ಯೆಯ ದೇಶವಾಗಿದ್ದು, ಯುವಜನರ ಪ್ರಮಾಣ ಹೆಚ್ಚಿದೆ. ಜಾಗತಿಕ ಮಟ್ಟದಲ್ಲಿ ಸೇವಾ ಮತ್ತು ಉತ್ಪಾದನಾ ಕ್ಷೇತ್ರಗಳಲ್ಲಿ ಭಾರತ ವಿಶ್ವಾಸಾರ್ಹ ದೇಶವಾಗಿ ಹೊರಹೊಮ್ಮುತ್ತಿದೆ. ಮತ್ತು ಮಧುಮೇಹ, ಕ್ಯಾನ್ಸರ್ ಹಾಗೂ ಅತಿಯಾದ ತೂಕ (ಒಬೆಸಿಟಿ) ಸಮಸ್ಯೆಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಆರೋಗ್ಯ ವ್ಯವಸ್ಥೆಯನ್ನು ಬಲಪಡಿಸುವ ಅಗತ್ಯತೆಯೂ ಇದೆ ಎಂದು ಅವರು ತಿಳಿಸಿದರು.

ದೇಶದಲ್ಲಿ ವೈದ್ಯರ ಕೊರತೆಯನ್ನು ನೀಗಿಸಲು ಮೆಡಿಕಲ್ ಕಾಲೇಜುಗಳ ಸಂಖ್ಯೆ ಹೆಚ್ಚಿಸಲಾಗಿದ್ದು, ತರಬೇತಿ ಹೊಂದಿದ ವೈದ್ಯರ



ಸಂಖ್ಯೆಯನ್ನು 51,000 ರಿಂದ 1.31 ಲಕ್ಷಕ್ಕೆ ಏರಿಕೆಯಾಗಲು ಕ್ರಮವಹಿಸಲಾಗಿದೆ. ಜೊತೆಗೆ, ಬೇಡಿಕೆಗೆ ಅನುಗುಣವಾಗಿ ಹೊಸ ಮಾದರಿಯಲ್ಲಿ ತಜ್ಞ ವೈದ್ಯರನ್ನು ಆಸ್ಪತ್ರೆಗಳಿಗೆ ನೇಮಿಸುವ ಯೋಜನೆಯೂ ಜಾರಿಯಲ್ಲಿದೆ ಎಂದು ಅವರು ಹೇಳಿದರು.

ಆಯುಷ್ಮಾನ್ ಭಾರತ ಮತ್ತು ಇತರ ಯೋಜನೆಯಡಿ ಜನರಿಗೆ ಉಚಿತ ಅಥವಾ ಕಡಿಮೆ ವೆಚ್ಚದ ಚಿಕಿತ್ಸೆಯನ್ನು ಒದಗಿಸಲಾಗುತ್ತಿದೆ. ಅಂಗವಿಕಲರು ಮತ್ತು ವೃದ್ಧರಿಗೆ ಸಹಾಯವಾಗುವ ಅಲಿಂಕೊ ಕೇಂದ್ರವನ್ನು ಹುಬ್ಬಳ್ಳಿಯ ಕೆ.ಎಂ.ಸಿ ಆಸ್ಪತ್ರೆಯಲ್ಲಿ ಆರಂಭಿಸಲಾಗಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಚಿವ ದಿನೇಶ ಗುಂಡೂರಾವ್ ಅವರು ಮಾತನಾಡಿ, ಹೊಸ ಸಮುದಾಯ ಆರೋಗ್ಯ ಕೇಂದ್ರವು ಇಂದು ಲೋಕಾರ್ಪಣೆಗೊಂಡಿದ್ದು, ಈ ಪ್ರದೇಶದ ಜನರಿಗೆ ಹತ್ತಿರದಲ್ಲಿ ಗುಣಮಟ್ಟದ ವೈದ್ಯಕೀಯ ಸೇವೆಗಳು ಲಭ್ಯವಾಗಲಿವೆ. ಇದೀಗ ಕಾಮಗಾರಿ ಪೂರ್ಣಗೊಂಡು ಸಾರ್ವಜನಿಕ ಸೇವೆಗೆ ಮುಕ್ತವಾಗಿದೆ ಎಂದು ಅವರು ಹೇಳಿದರು.

ಈ ಕೇಂದ್ರದಲ್ಲಿ ತಜ್ಞ ವೈದ್ಯರು, ವೈದ್ಯಾಧಿಕಾರಿಗಳು ಹಾಗೂ ವಿಶೇಷವಾಗಿ ಸ್ತ್ರೀರೋಗ, ಮಕ್ಕಳ ಹಾಗೂ ಅರವಳಿಕೆ ತಜ್ಞರನ್ನು ನಿಯೋಜಿಸುವ ಯೋಜನೆ ಇದೆ. ಇದರಿಂದ ಜಿಲ್ಲಾ ಆಸ್ಪತ್ರೆಗೆ ಹೋಗುವ ಅಗತ್ಯ ಕಡಿಮೆಯಾಗುತ್ತದೆ, ಗ್ರಾಮೀಣ ಪ್ರದೇಶದಲ್ಲೇ ಹೆಚ್ಚಿನ ಚಿಕಿತ್ಸೆ ಸಿಗಲಿದೆ ಎಂದು ಅವರು ತಿಳಿಸಿದರು.

ಇತ್ತೀಚಿನ ದಿನಗಳಲ್ಲಿ ಕ್ಯಾನ್ಸರ್, ಹೃದಯಾಘಾತ, ಮಧುಮೇಹ, ರಕ್ತದೊತ್ತಡ ಹಾಗೂ ಮೂತ್ರಪಿಂಡ ಸಂಬಂಧಿತ ಕಾಯಿಲೆಗಳು ಹೆಚ್ಚುತ್ತಿರುವುದಕ್ಕೆ ಆಹಾರ ಪದ್ಧತಿ, ಜೀವನಶೈಲಿ ಹಾಗೂ ಪರಿಸರ ಕಾರಣಗಳಾಗಿವೆ ಆದ್ದರಿಂದ ರೋಗ ಬಂದ ಬಳಿಕ ಚಿಕಿತ್ಸೆಗಿಂತ, ರೋಗ ಬರದ ಹಾಗೆ ಮುಂಜಾಗ್ರತೆಯಿಂದ ಇರುವುದು, ಉತ್ತಮವಾದ ಆಹಾರವನ್ನು ಸೇವನೆ ಮಾಡುವುದು ಅತ್ಯಂತ ಅಗತ್ಯ ಎಂದು ಅವರು ಹೇಳಿದರು.

ಗೃಹ ಆರೋಗ್ಯ ಯೋಜನೆಯಲ್ಲಿ ಮನೆಗಳಿಗೆ ಭೇಟಿ ನೀಡಿ, ರಕ್ತದೊತ್ತಡ, ಮಧುಮೇಹ ಸೇರಿದಂತೆ ಹಲವು ಕಾಯಿಲೆಗಳ ತಪಾಸಣೆ ನಡೆಸಲಾಗಿದೆ. ಕೆಲವು ಮಹಿಳೆಯರಲ್ಲಿ ಸ್ತನ ಕ್ಯಾನ್ಸರ್ ಇರುವ ಸಂಭಾವ್ಯತೆ ಕಂಡುಬಂದಿದೆ. ಹಲವು ಮಹಿಳೆಯರಲ್ಲಿ ಗರ್ಭಕಂಠ ಕ್ಯಾನ್ಸರ್ ಪರೀಕ್ಷೆಗೆ ರೆಫರ್ ಮಾಡಲಾಗಿದೆ. ಹಾಗೂ ಸುಮಾರು ಜನರಿಗೆ ಅನೀಮಿಯಾ ಸಹ ಪತ್ತೆಯಾಗಿದೆ. ಈ ಯೋಜನೆಯಡಿ ಉಚಿತ ಚಿಕಿತ್ಸೆ ಹಾಗೂ ದೀರ್ಘಕಾಲಿಕ ಔಷಧಿ ವಿತರಣೆ ನಡೆಯುತ್ತಿದೆ ಎಂದು ಅವರು ಹೇಳಿದರು.

ಡಾ. ಪುನೀತ್ ರಾಜಕುಮಾರ ಯೋಜನೆ ಮೂಲಕ ಹೃದಯಾಘಾತದ ತುರ್ತು ಚಿಕಿತ್ಸೆಗಾಗಿ ತಾಲೂಕು ಆಸ್ಪತ್ರೆಗಳಲ್ಲಿ ಇಸಿಜಿ ಪರೀಕ್ಷೆ ಹಾಗೂ ತಕ್ಷಣದ ಚಿಕಿತ್ಸೆ ವ್ಯವಸ್ಥೆ ಮಾಡಲಾಗಿದೆ. ಕೇವಲ 10 ನಿಮಿಷಗಳಲ್ಲಿ ತಜ್ಞರ ಸಲಹೆ ಪಡೆದು ರೋಗಿಗೆ ಚಿಕಿತ್ಸೆ ನೀಡುವ ಮೂಲಕ ಅನೇಕ ಜೀವಗಳನ್ನು ಉಳಿಸಲಾಗಿದೆ ಎಂದು ಆರೋಗ್ಯ ಸಚಿವರ ತಿಳಿಸಿದರು.

ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಸಹಕಾರದಿಂದ ಜಿಲ್ಲಾ ಆಸ್ಪತ್ರೆಗಳಲ್ಲಿ ಡೇ ಕೇರ್ ಕಿಮೋಥೆರಪಿ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಕ್ಯಾನ್ಸರ್ ರೋಗಿಗಳಿಗೆ ಸ್ಥಳೀಯ ಮಟ್ಟದಲ್ಲೇ ಚಿಕಿತ್ಸೆ ಲಭ್ಯವಾಗುತ್ತಿದೆ. ಒಟ್ಟಾರೆ, ಈ ಹೊಸ ಆರೋಗ್ಯ ಕೇಂದ್ರ ಮತ್ತು ವಿವಿಧ ಯೋಜನೆಗಳು ಗ್ರಾಮೀಣ ಪ್ರದೇಶದ ಜನರಿಗೆ ಸುಲಭ, ಕಡಿಮೆ ವೆಚ್ಚದ ಹಾಗೂ ಗುಣಮಟ್ಟದ ಆರೋಗ್ಯ ಸೇವೆ ಒದಗಿಸುವ ದಿಕ್ಕಿನಲ್ಲಿ ಮಹತ್ವದ ಹೆಜ್ಜೆಯಾಗಿದೆ ಎಂದು ಅವರು ಹೇಳಿದರು.

ವೇದಿಕೆಯಲ್ಲಿ ಕರ್ನಾಟಕ ಬಾಲವಿಕಾಸ ಅಕಾಡೆಮಿಯ ಅಧ್ಯಕ್ಷ ಅಡಿವೇಶ ಗಿರೆಪ್ಪಾ ಇಟಗಿ, ಮಾಜಿ ಶಾಸಕರಾದ ಅಮೃತ್ ದೇಸಾಯಿ, ಸೀಮಾ ಮಸೂತಿ, ವಿಭಾಗಿಯ ಜಂಟಿ ನಿರ್ದೇಶಕಿ ಪುಷ್ಪಾ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಸಂಗಪ್ಪ ಗಾಬಿ, ತಹಸಿಲ್ದಾರ್ ಡಾ. ಡಿ.ಹೆಚ್.ಹೂಗಾರ, ಅನಿಲಕುಮಾರ್ ಪಾಟೀಲ, ಸಮಾಜದ ಮುಖಂಡರು ಮತ್ತು ಊರಿನ ಮುಖಂಡರುಗಳು ಉಪಸ್ಥಿತರಿದ್ದರು.

ಜಿಲ್ಲಾ ಆರೋಗ್ಯಾಧಿಕಾರಿ ಡಾ.ಎಸ್.ಎಮ್.ಹೊನಕೇರಿ ಅವರು ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಆಶಾ ಕಾರ್ಯಕರ್ತೆಯರು ಇಲಾಖೆ ಸಿಬ್ಬಂದಿ ವರ್ಗದವರು, ಸಾರ್ವಜನಿಕರು ಭಾಗವಹಿಸಿದ್ದರು.

# ಬೇಸಿಗೆ ಮುಗಿಯುವವರೆಗೆ ಎಲ್ಲ ತಹಶೀಲ್ದಾರರು, ತಾ.ಪಂ.ಕಾರ್ಯನಿರ್ವಾಹಕ ಅಧಿಕಾರಿಗಳು ನಿರಂತರ ನಿಗಾವಹಿಸಿ, ಕುಡಿಯುವ ನೀರಿನ ಸಮಸ್ಯೆ ಆಗದಂತೆ ಕ್ರಮವಹಿಸಬೇಕು: ಉಸ್ತುವಾರಿ ಸಚಿವ ಸಂತೋಷ ಲಾಡ್ ಸೂಚನೆ



**ಬೆಳಗಾವಿ ವಾರ್ತೆ ಧಾರವಾಡ:** ಬೇಸಿಗೆ ಕಾಲ ಮುಗಿಯು ವವರೆಗೆ ಜಿಲ್ಲೆಯಲ್ಲಿ ಯಾವುದೇ ಗ್ರಾಮ ಹಾಗೂ ಪಟ್ಟಣಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ತಹಶೀಲ್ದಾರರು ಮತ್ತು ತಾಲೂಕಾ ಪಂಚಾ ಯತ ಕಾರ್ಯ ನಿರ್ವಾಹಕ ಅಧಿಕಾರಿಗಳು ನಿರಂತರವಾಗಿ ನಿಗಾವಹಿಸ ಬೇಕು. ಈಗಾಗಲೇ ಜಿಲ್ಲೆಯ ವಿವಿಧ ತಾಲೂಕುಗಳ 15 ಗ್ರಾಮಗಳಲ್ಲಿ 17 ಕೊಳವೆಬಾವಿಗಳ ಮೂಲಕ ಕುಡಿ ಯುವ ನೀರು ಸರಬರಾಜು ಮಾಡಲಾಗು ತ್ತಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದು, ಜಿಲ್ಲಾಡಳಿತ ಮೇಲುಸ್ತುವಾರಿ ಯಲ್ಲಿ ಕ್ರಮವಹಿಸಿ, ಸಾರ್ವಜನಿಕರಿಗೆ ಕುಡಿಯುವ ನೀರಿನ ತೊಂದರೆಯಾಗದಂತೆ ನೋಡಿಕೊಳ್ಳಬೇಕೆ ಂದು ಕಾರ್ಮಿಕ ಇಲಾಖೆ ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಅವರು ಹೇಳಿದರು. ಅವರು ಇಂದು (ಏ.27) ಬೆಳಿಗ್ಗೆ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ 2025–26 ನೇ ಸಾಲಿನ ಮಾರ್ಚ 2026 ರ ಅಂತ್ಯಕ್ಕೆ ಕೊನೆಗೊಂಡಂತೆ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ಯೋಜನೆಯಡಿ ನಾಲ್ಕನೇಯ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯನ್ನು ಜರುಗಿಸಿ, ಮಾತನಾಡಿದರು. ಮುಂಗಾರು ಪೂರ್ವದಲ್ಲಿ ಮಳೆಗಳು ಹೆಚ್ಚಾಗುತ್ತಿದ್ದು, ಯಾವುದೇ ಹಾನಿಯಾಗ ದಂತೆ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಅಧಿಕಾರಿಗಳು ಕೈಗೊಳ್ಳಬೇಕು. ಕೃಷಿ ಚಟುವಟಿಕೆಗಳು ಆರಂಭವಾಗಿದ್ದು, ರೈತರಿಗೆ ಅಗತ್ಯವಿರುವ ಬೀಜ, ರಸಗೊಬ್ಬರ ಪೂರೈಕೆ ಯಾಗಬೇಕು. ಬಿತ್ತನೆ ಸಮಯ ದಲ್ಲಿ ಯಾವುದೇ ಗೊಂದಲ ಉಂಟಾಗದಂತೆ ಕೃಷಿ ಇಲಾಖೆ ಯೋಜನಾ ಬದ್ಧ ವಾಗಿ ಬೀಜ, ರಸಗೊಬ್ಬರ ವಿತರಣೆಯನ್ನು ಮಾಡಬೇಕೆಂದು ಸಚಿವರು ಸೂಚಿಸಿದರು.

ಕೃಷಿ ಉತ್ಪನ್ನ ಮಾರುಕಟ್ಟೆ ಇಲಾಖೆಯು ಜಿಲ್ಲೆಯ ಎಪಿಎಂಸಿ ಗಳ ಸುಧಾರಣೆಗೆ ಅಗತ್ಯವಾದ ಪ್ರಸ್ತಾವನೆಯನ್ನು ರೂಪಿಸಬೇಕು. ಪಿಪಿಟಿ ಮೂಲಕ ಇಲಾಖೆಯಿಂದ ಜನಪ್ರತಿನಿಧಿಗಳ ಮುಂದೆ ಪ್ರದರ್ಶನ ನೀಡಿ, ಎಪಿಎಂಸಿ ಗಳ ಅಭಿವೃದ್ಧಿಗೆ ಯಾವೆಲ್ಲ ಕ್ರಮಗಳನ್ನು ಕೈಗೊಳ್ಳಬೇಕೆಂದು ವಿವರಿಸಬೇಕು. ಅಗತ್ಯವಿದ್ದಲ್ಲಿ ಸರ್ಕಾರಿಂದ ವಿಶೇಷ ಅನುದಾನ ತರಲು ಪ್ರಯತ್ನಿಸಲಾಗುವುದು. ಬೆಂಬಲ ಬೆಲೆ ಯೋಜನೆಯಡಿ ಕಡಲೆಕಾಳು ಖರೀದಿ ಕೇಂದ್ರಗಳಲ್ಲಿ ಚೀಲಗಳ ಕೊರತೆ ಯಾದ ಕುರಿತು ಮನವಿ ಸಲ್ಲಿಕೆಯಾ ಗುತ್ತಿವೆ. ಈ ಕುರಿತು ಕ್ರಮವಹಿಸಿ, ಜಿಲ್ಲೆಗೆ ಅಗತ್ಯವಿರುವ ಗೋಣಿಚೀಲಗಳನ್ನು ತರಿಸಬೇಕು. ಮತ್ತು ಬ್ಯಾಹಟ್ಟಿ ಖರೀದಿ ಕೇಂದ್ರದಿಂದ ಖರೀದಿಸಿದ್ದ ರೈತರ ಹೆಸರು ಕಾಳು ಕುರಿತು ಹಣ ಪಾವತಿಸುವಲ್ಲಿ ತಾಂತ್ರಿಕ ಸಮಸ್ಯೆ ಆಗಿದ್ದು, ಸಂಬಂಧಿಸಿದ ಅಧಿಕಾರಿಗಳು ಪರಿಶೀಲಿಸಿ, ಸಮಸ್ಯೆ ಬಗೆಹರಿಸಬೇಕು ಎಂದು ಸಚಿವರು ನಿರ್ದೇಶಿಸಿದರು.

ಕುಡಿಯುವ ನೀರು ಸಂಬಂಧಿತ ಜಲಜೀವನ ಮಿಷನ್ ಯೋಜನೆಯು ನಿಧಾನಗತಿಯಲ್ಲಿ ಸಾಗುತ್ತಿದೆ. ಸಾಕಷ್ಟು ಬಾರಿ ಎಚ್ಚರಿಕೆ ನೀಡಿ, ಎಲ್ ಆ್ಯಂಡ್ ಟಿ ಕಂಪನಿಗೆ ಈಗಾಗಲೇ ರೂ. 30 ಕೋಟಿ ದಂಡವಿಧಿಸಲಾಗಿದೆ. ಮೇ ಅಂತ್ಯದೊಳಗೆ 28 ಗ್ರಾಮಗಳಿಗೆ ಯೋಜನೆಯಡಿ ಕುಡಿಯುವ ನೀರು ಸರಬರಾಜು ಮಾಡಲು ಕ್ರಮವಹಿಸಿದ್ದಾರೆ. ಮಾರ್ಚ 2027 ರವರೆಗೆ ಜಿಲ್ಲೆಯ ಎಲ್ಲ ಗ್ರಾಮಗಳಿಗೆ ಕುಡಿಯುವ ನೀರು ಸರಬರಾಜು ಯೋಜ ನೆಯನ್ನು ಪೂರ್ಣಗೊಳಿಸಲಾಗುವುದು ಎಂದು ತಿಳಿಸಿಲಾಗಿದೆ. ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿಗಳು ಜಲಜೀವನ ಮಿಷನ್ ಕಾಮಗಾರಿಗಳು ಗುಣಮಟ್ಟದಿಂದ ಮತ್ತು ಒಪ್ಪಂದದಂತೆ ಅನುಷ್ಠಾನ ಗೊಳ್ಳುವುದನ್ನು ಖಾತ್ರಿಪಡಿಸಿಕೊಳ್ಳಬೇಕು. ಮತ್ತು ಸರಿಯಾಗಿ ಮೇಲುಸ್ತುವಾರಿ ವಹಿಸ ಬೇಕೆಂದು ಸಚಿವರು ಸೂಚನೆ ನೀಡಿದರು.

ಹುಬ್ಬಳ್ಳಿ–ಧಾರವಾಡ ಅವಳಿನಗರಕ್ಕೆ 43 ಎಂಎಲ್‌ಡಿ (MLD) ಪ್ರಮಾಣದ ಕುಡಿಯುವ ನೀರಿನ ಸರಬರಾಜು ಪ್ರಾರಂಭವಾಗಿದೆ. ಮೇ 10 ರೊಳಗಾಗಿ ಎಲ್ಲ ವಾರ್ಡಗಳಿಗೆ ನಾಲ್ಕರಿಂದ ಐದು ದಿನಗಳಿಗೊಮ್ಮೆ ನೀರು ಸರಬರಾಜು ಮಾಡಲಾಗುವುದೆಂದು ಪಾಲಿಕೆ ಹಾಗೂ ಎಲ್ ಆ್ಯಂಡ್ ಟಿ ಅಧಿಕಾರಿಗಳು ತಿಳಿಸಿದ್ದು, ಸಂಬಂಧಿಸಿದ ಅಧಿಕಾರಿಗಳು ಕಾಮಗಾರಿ ಪ್ರಗತಿಯನ್ನು ಪರಿಶೀಲಿಸಿ, ಶೀಘ್ರವಾಗಿ ಸಾರ್ವಜನಿಕರಿಗೆ ನಿಯಮಿತವಾಗಿ ಕುಡಿಯುವ ನೀರು ದೊರೆಯುವಂತೆ ಕ್ರಮವಹಿಸಬೇಕೆಂದು ಸಚಿವ ಸಂತೋಷ ಲಾಡ್ ಅವರು ಹೇಳಿದರು.

ಶಾಸಕ ಎನ್.ಎಚ್.ಕೋನರಡ್ಡಿ ಅವರು ಮಾತನಾಡಿ, ನವಲಗುಂದ ಸೇರಿದಂತೆ ಜಿಲ್ಲೆಯಲ್ಲಿ ತೆರೆದಿರುವ ಸರಕಾರದ ವಿವಿಧ ಖರೀದಿ ಕೇಂದ್ರಗಳಲ್ಲಿ ಗೋಣಿಚೀಲಗಳ ಕೊರತೆ ಉಂಟಾಗಿದೆ. ರೈತರು ಕಡಲೆ ರಾಶಿ ತೆಗೆದುಕೊಂಡು ಖರೀದಿ ಕೇಂದ್ರಗಳ ಮುಂದೆ ಕಾಯುತ್ತಿದ್ದಾರೆ. ಅವರಿಗೆ ಅಗತ್ಯವಿರುವಷ್ಟು ಗೋಣಿಚೀಲ ತಕ್ಷಣ ಪೂರೈಸಲು ಕ್ರಮ ವಹಿಸಬೇಕೆಂದು ಹೇಳಿದರು. ಮತ್ತು ಬ್ಯಾಹಟ್ಟಿ ಖರೀದಿ ಕೇಂದ್ರದಲ್ಲಿ ಹೆಸರು ಖರೀದಿಸಿ, ಸುಮಾರು 81 ಜನ ರೈತರಿಗೆ ಹಣ ನೀಡಿಲ್ಲ. ಈ ಕುರಿತು ಎಪಿಎಂಸಿ ಹಾಗೂ ಸಂಬಂಧಿಸಿದ ಅಧಿಕಾರಿಗಳು ಪರಿಶೀಲಿಸಿ, ಖರೀದಿ ಮೊತ್ತ ಪಾವತಿಸಲು ಕ್ರಮವಹಿಸಬೇಕೆಂದು ಶಾಸಕರು ತಾಕೀತು ಮಾಡಿದರು.

ವಿಧಾನ ಪರಿಷತ್ತ ಸರಕಾರಿ ಮುಖ್ಯ ಸಚೇತಕರಾದ ಸಲೀಂ ಅಹ್ಮದ್ ಅವರು ಮಾತನಾಡಿ, ಜಿಲ್ಲೆಯಲ್ಲಿ ರೈತರ ಸಮಸ್ಯೆಗಳನ್ನು ಪರಿಹರಿಸಲು ಅಧಿಕಾರಿಗಳು ಹೆಚ್ಚು ಆಸಕ್ತಿ ವಹಿಸಬೇಕು. ನಗರ ಮತ್ತು ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರು ಕೊರತೆ ಆಗದಂತೆ ಎಚ್ಚರಿಕೆ ವಹಿಸಬೇಕು. ಈಗಾಗಲೇ ಕೆಲವು ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗುತ್ತಿದೆ. ಅಧಿಕಾರಿಗಳು ಶೀಘ್ರ ಕ್ರಮವಹಿಸಬೇಕು ಎಂದು ಹೇಳಿದರು.

ಹುಬ್ಬಳ್ಳಿಯ ಗಬ್ಬೂರ ಕ್ರಾಸ್‌ದಲ್ಲಿ ಸಾರ್ವಜನಿಕರಿಗೆ ಅನುಕೂಲವಾಗುವಂತೆ ತಾತ್ಕಾಲಿಕ ತಕ್ಷಣ ಬಸ್ ಸ್ಟಾಂಡ್ ನಿರ್ಮಿಸಬೇಕು. ಸುಡುಬಿಸಿಲಿನಲ್ಲಿ ಅನೇಕ ಪ್ರಯಾಣಿಕರು, ಗ್ರಾಮಸ್ಥರು ಬಸ್‌ಗಾಗಿ ಕಾಯಿತ್ತಾ ನಿಂತಿರುತ್ತಾರೆ. ಅಲ್ಲಿ ಬಸ್ ನಿಲ್ದಾಣ ಹಾಗೂ ಕುಡಿಯುವ ನೀರಿನ ವ್ಯವಸ್ಥೆಯಾಗಬೇಕು. ಮತ್ತು ರಾಯನಾಳ ಗ್ರಾಮದಲ್ಲಿ ಎನ್.ಎಚ್–4 ರಾಷ್ಟ್ರೀಯ ಹೆದ್ದಾರಿಗೆ ಹೊಂದಿಕೊಂಡಿರುವ ಸರ್ವಿಸ್ ರಸ್ತೆಗೆ ಲಿಂಕ್ ರಸ್ತೆ ನಿರ್ಮಿಸಿಕೊಡಲು ಗ್ರಾಮಸ್ಥರು ಮನವಿ ಮಾಡಿದ್ದು, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು ಮತ್ತು ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳು ಈ ಬೇಡಿಕೆಯನ್ನು ಪರಿಶೀಲಿಸಿ, ಮುಂಗಾರು ಪೂರ್ವದಲ್ಲಿ ಕ್ರಮವಹಿಸಬೇಕೆಂದು ಅವರು ಹೇಳಿದರು.

ಶಾಸಕ ಎಂ.ಆರ್.ಪಾಟೀಲ ಅವರು ಮಾತನಾಡಿ, ಬೆಂಬಲ ಬೆಲೆ ಯೋಜನೆಯಡಿ ತಾಲೂಕುಗಳಲ್ಲಿ ತೆರೆದಿರುವ ಖರೀದಿ ಕೇಂದ್ರಗಳು ಸರಿಯಾಗಿ ರೈತರಿಗೆ ಸ್ಪಂದಿಸಬೇಕು. ಕಡಲೆ ಖರೀದಿಗೆ ಸಣಬಿನ ಚೀಲಗಳ ಕೊರತೆ ಆಗಿದೆ. ಅಧಿಕಾರಿಗಳು ಚೀಲ ಪೂರೈಸಿ, ಕಡಲೆ ಕಾಳು ಖರೀದಿಸಬೇಕು. ಈಗಾಗಲೇ ಮಳೆ ಆರಂಭವಾಗಿರುವದರಿಂದ ರೈತರು ಕೃಷಿ ಕಾರ್ಯ ಆರಂಭಿಸಿದ್ದಾರೆ. ರೈತರಿಗೆ ಅಗತ್ಯ ಬೀಜ, ಗೊಬ್ಬರ ಪೂರೈಸಲು ಕ್ರಮವಹಿಸಬೇಕೆಂದು ಅವರು ಹೇಳಿದರು.

ಶಾಸಕ ಮಹೇಶ ಟೆಂಗಿನಕಾಯಿ ಅವರು ಮಾತನಾಡಿ, ಅವಳಿನಗರದಲ್ಲಿ ಕುಡಿಯುವ ನೀರು ಸರಬರಾಜು ನಿಯಮಿತವಾಗಿ ಆಗುತ್ತಿಲ್ಲ. ಪ್ರತಿ ಎಂಟತ್ತು ದಿನಗಳಿಗೆ ಒಮ್ಮೆ ನೀರು ಬರುತ್ತಿದೆ. ಸಾರ್ವ ಜನಿಕರಿಗೆ ತೊಂದರೆ ಆಗುತ್ತಿದೆ. ಮಹಾ ನಗರ ಪಾಲಿಕೆ ಅಧಿಕಾರಿಗಳು ಮತ್ತು ಎಲ್ ಆ್ಯಂಡ್ ಟಿ ಕಂಪನಿ ಅಧಿಕಾರಿಗಳು ವಾರ್ಡ ಗಳಿಗೆ ಭೇಟಿ ನೀಡಿ, ಪರಿಶೀಲಿಸಿ, ಕ್ರಮ ವಹಿಸಬೇಕು ಎಂದು ಅವರು ಹೇಳಿದರು.

ಅಂತರಜಾತಿ ವಿವಾಹ ಆಗಿರುವ ಕುಟುಂಬಗಳಿಗೆ ಸರ್ಕಾರದ ಪ್ರೋತ್ಸಾಹ ಧನ ವಿತರಣೆಯಾಗಬೇಕು. ಅನೇಕ ಅರ್ಜಿಗಳು ಸಮಾಜ ಕಲ್ಯಾಣ ಇಲಾಖೆಯಿಂದ ವಿಲೇವಾರಿಗೆ ಬಾಕಿ ಇದ್ದು, ಸಂಬಂಧಿಸಿದ ಅಧಿಕಾರಿಗಳು ತಕ್ಷಣ ಕ್ರಮವಹಿಸಿ, ಸರ್ಕಾರದ ಸೌಲಭ್ಯ ಅರ್ಹರಿಗೆ ತಲುಪ ವಂತೆ ಮಾಡಬೇಕೆಂದು ಅವರು ಹೇಳಿದರು.

ವಿಧಾನ ಪರಿಷತ್ತ ಸದಸ್ಯ ಎಫ್.ಎಚ್.ಜಕ್ಕಪ್ಪನವರ ಮಾತನಾಡಿ, ಪ್ರಸಕ್ತ ಸಾಲಿನ ಶಾಲಾ ಫಲಿತಾಂಶ ಉತ್ತಮ ಪಡಿಸಿರುವ ಅಧಿಕಾರಿಗಳನ್ನು ಅಭಿನಂದಿಸಿದರು. ಹುಬ್ಬಳ್ಳಿ ನಗರದ ಚಲವಾದಿ ಓಣಿಯಲ್ಲಿ ಸಾರ್ವಜನಿಕರಿಗೆ ಕುಡಿಯಲು ನಿರಂತರ ನೀರು ವ್ಯವಸ್ಥೆ ಮಾಡಬೇಕು. ಇದು ಡಾ.ಬಿ.ಆರ್.ಅಂಬೇಡ್ಕರ್ ಅವರು ಭೇಟಿ ನೀಡಿದ ಸ್ಥಳವಾಗಿರುವದರಿಂದ ಐತಿಹಾಸಿಕ ಪ್ರದೇಶವಾಗಿದೆ. ಈ ಸ್ಥಳದ ಅಭಿವೃದ್ಧಿ ಪಡಿಸಲು ಮತ್ತು ಇಲ್ಲಿನ ನಿವಾಸಿಗಳಿಗೆ ಮೂಲಸೌಕರ್ಯ ಕಲ್ಪಿಸಲು ಪಾಲಿಕೆ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಅವರು ಹೇಳಿದರು.

ಜಿಲ್ಲಾಧಿಕಾರಿ ಸ್ನೇಹಲ್. ಆರ್. ಅವರು ಮಾತನಾಡಿ, ಜಿಲ್ಲೆಯ ಎಲ್ಲ ಇಲಾಖೆಗಳ ಪ್ರಗತಿ ಪರಿಶೀಲನೆ ಮಾಡಲಾಗಿದ್ದು, ಸರ್ಕಾರದಿಂದ ಬಿಡುಗಡೆಯಾದ ಅನುದಾನವನ್ನು ಸಮರ್ಪಕವಾಗಿ ಬಳಕೆ ಮಾಡಲಾಗಿದ್ದು, ಉಳಿದಂತೆ ಬರಬೇಕಾದ ಅನುದಾನವನ್ನು ನಿಯಮಾನುಸಾರ ವೆಚ್ಚ ಮಾಡಲು ಸೂಚನೆ ನೀಡಲಾಗಿದೆ. ಖರೀದಿ ಕೇಂದ್ರಗಳಿಗೆ ಸಂಬಂಧಿಸಿದ ಸಮಸ್ಯೆಗಳ ಕುರಿತು ಎಪಿಎಂಸಿ ಹಾಗೂ ಇಲಾಖಾ ಅಧಿಕಾರಿಗಳಿಗೆ ಸೂಕ್ತ ಸೂಚನೆಗಳನ್ನು ನೀಡಲಾಗಿದೆ. ಬ್ಯಾಹಟ್ಟಿ ಖರೀದಿ ಕೇಂದ್ರದ ಹೆಸರು ಮಾರಾಟ ಕುರಿತ ರೈತರ ಸಮಸ್ಯೆಯನ್ನು ಪರಿಶೀಲಿಸಿ, ಸೂಕ್ತ ವರದಿ ಸಲ್ಲಿಸಲು ಉಪವಿಭಾಗಾಧಿಕಾರಿಗಳನ್ನು ನೇಮಿಸಲಾಗಿದೆ. ಅವರ ವರದಿಯನ್ನು ಪರಿಶೀಲಿಸಿ, ಸೂಕ್ತ ಕ್ರಮವಹಿಸಲಾಗುವುದು ಎಂದು ಅವರು ಹೇಳಿದರು.

ಸಭೆಯಲ್ಲಿ ಕೃಷಿ, ತೋಟಗಾರಿಕೆ, ಗ್ರಾಮೀಣ ಕುಡಿಯುವ ನೀರು, ಲೋಕೋಪಯೋಗಿ ಇಲಾಖೆ, ಕೃಷಿ ಮಾರುಕಟ್ಟೆ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖೆ, ಪಶುಪಾಲನೆ ಇಲಾಖೆ, ಶಿಕ್ಷಣ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ ಮಾಡಲಾಯಿತು. ವೇದಿಕೆಯಲ್ಲಿ ಮಹಾನಗರ ಪೊಲೀಸ್ ಆಯುಕ್ತ ಎನ್.ಶಶಿಕುಮಾರ, ಎನ್. ಡಬ್ಲ್ಯು.ಕೆ.ಆರ್.ಟಿ.ಸಿ ವ್ಯವಸ್ಥಾಪಕ ನಿರ್ದೇಶಕಿ ಪ್ರಿಯಾಂಗಾ ಎಂ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ, ಉಪ ಪೊಲೀಸ್ ಆಯುಕ್ತೆ ಶೃತಿ ಎನ್.ಎಸ್. ಇದ್ದರು.

ಸಭೆಯಲ್ಲಿ ಜಿಲ್ಲಾ ಕೆಡಿಪಿ ನಾಮನಿರ್ದೇಶಿತ ಸದಸ್ಯರಾದ ನಾಗರಾಜ ಹೆಗ್ಗಣ್ಣವರ, ಆರ್.ಎಚ್.ಕೋನರಡ್ಡಿ, ಸಲೀಮ್ ಸುಂಡಕೆ, ಯಲ್ಲಪ್ಪ ಗುಡದರಿ, ಲಲಿತಾ ಗುರುಸಿದ್ದೇಶ ಬೆಂಗೇರಿ ಹಾಗೂ ಗ್ಯಾರಂಟಿ ಯೋಜನೆಗಳ ಜಿಲ್ಲಾ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಸ್.ಆರ್.ಪಾಟೀಲ, ಧಾರವಾಡ ಕೆಎಂಎಫ್ ಅಧ್ಯಕ್ಷ ಶಂಕರ ಮುಗದ ಮತ್ತು ಕೃಷಿ ಉತ್ಪನ್ನ ಮಾರುಕಟ್ಟೆ ಇಲಾಖೆಯ ಉಪ ನಿರ್ದೇಶಕ ಲಮಾಣಿ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ ಅಂತರವಳ್ಳಿ, ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆ ಇಇ ಜಗದೀಶ ಪಾಟೀಲ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ತಹಶಿಲ್ದಾರರು, ತಾ.ಪಂ. ಕಾರ್ಯನಿರ್ವಾ ಹಕ ಅಧಿಕಾರಿಗಳು, ವಿವಿಧ ಇಲಾಖೆಗಳ ತಾಲೂಕು ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001